ವಿಜಯಪುರ | ಸಂಪುಟ 04 | ಸಂಚಿಕೆ 98 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ  Editor: Indushekhar Manur

editor.udayarashmi@gmail.com  RNI NO: KARKAN/2023/86203  ಶುಕ್ರವಾರ, ಜೂನ್, 05, 2026

"ಸಿಎಂ ಡಿ.ಕೆ.ಶಿವಕುಮಾರ ಹೊಸ ಸಚಿವ ಸಂಪುಟದಲ್ಲಿ ಹಳೆಯ ಮುಖಗಳೇ ಕಾಣಿಸುತ್ತಿವೆ. ಜನರು ಹೊಸ ಚೈತನ್ಯ ಮತ್ತು ಹೊಸ ದಿಕ್ಕನ್ನು ನಿರೀಕ್ಷಿಸಿದ್ದರು. ಆದರೆ ಅದೇ ಹಳೆಯ ನಾಯಕರು ಮತ್ತೆ ಸಚಿವ ಸಂಪುಟದಲ್ಲಿ ಸ್ಥಾನ ಪಡೆದಿದ್ದಾರೆ; ಇದು ಹೊಸ ವೇಷದಲ್ಲಿರುವ ಹಳೆಯ ಸರ್ಕಾರವಾಗಿದೆ."



■ ಆರ್. ಅಶೋಕ
ವಿಧಾನಸಭೆ ವಿಪಕ್ಷ ನಾಯಕರು

## ಯಾದಗಿರಿಯಲ್ಲಿ ಮಹಿಳೆಯರೇ ನಿರ್ವಹಿಸುತ್ತಿರುವ ನಬಾರ್ಡ್ ನೆರವಿನ ಕಡಲೆಕಾಯಿ ಮೌಲ್ಯವರ್ಧನೆ ಘಟಕ ಉದ್ಘಾಟಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಕಳವಳ

# ಯಾದಗಿರಿ ಜಿಲ್ಲೆಯಲ್ಲಿ ಅನಕ್ಷರತೆ, ಬಡತನ, ಅತಿ ಕಡಿಮೆ ತಲಾ ಆದಾಯ

ಯಾದಗಿರಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಗುರುವಾರ ಕರ್ನಾಟಕದ ಯಾದಗಿರಿ ಜಿಲ್ಲೆಯ ಕಳಪೆ ಸಾಮಾಜಿಕ-ಆರ್ಥಿಕ ಸೂಚ್ಯಂಕಗಳ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಮಹಿಳಾ ಸಾಕ್ಷರತಾ ಪ್ರಮಾಣ ಕಡಿಮೆಯಾಗಿರುವುದು, ಬಹು ಆಯಾಮದ ಬಡತನದ ಪ್ರಮಾಣ ಹೆಚ್ಚಿರುವುದು, ರಾಜ್ಯದ ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಕೊನೆಯ ಸ್ಥಾನದಲ್ಲಿರುವುದು ಹಾಗೂ ತಲಾ ಆದಾಯ ಅತಿ ಕಡಿಮೆ ಇರುವುದು ಆತಂಕಕಾರಿ ಸಂಗತಿಗಳಾಗಿವೆ ಎಂದು ಹೇಳಿದರು.

ಕರ್ನಾಟಕದಿಂದ ರಾಜ್ಯಸಭಾ ಸದಸ್ಯೆಯಾಗಿರುವ ಸೀತಾರಾಮನ್, ಯಾದಗಿರಿಗೆ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಸ್ಥಳೀಯ ಆಡಳಿತದಿಂದ ತುರ್ತು ಮತ್ತು ವಿಶೇಷ ಗಮನದ ಅಗತ್ಯವಿದೆ ಎಂದು ಒತ್ತಿ ಹೇಳಿದರು.

ಯಾದಗಿರಿಯಲ್ಲಿ ಸಂಪೂರ್ಣವಾಗಿ ಮಹಿಳೆಯರೇ ನಿರ್ವಹಿಸುತ್ತಿರುವ ನಬಾರ್ಡ್ ನೆರವಿನ ಕಡಲೆಕಾಯಿ ಮೌಲ್ಯವರ್ಧನೆ ಘಟಕವನ್ನು ಉದ್ಘಾಟಿಸಿದ ಬಳಿಕ ಮಾತನಾಡಿದ ಅವರು, 'ಯಾದಗಿರಿ ಹಾಗೂ ಪಕ್ಕದ ರಾಯಚೂರು ಜಿಲ್ಲೆಗಳನ್ನು "ಆಕಾಂಕ್ಷಿ ಜಿಲ್ಲೆಗಳು" (೧ಶಿಡಿಚಿಣುಂಟಚಿಚಿಟ ಈುಣಡುಥಿಣ) ಎಂದು ಗುರುತಿಸಲಾಗಿದೆ. ಏಕೆಂದರೆ ಅಭಿವೃದ್ಧಿಯ ಫಲಗಳು ರಾಜ್ಯದ ಇತರ ಭಾಗಗಳಷ್ಟು ವೇಗವಾಗಿ ಈ ಪ್ರದೇಶಗಳಿಗೆ ತಲುಪಿಲ್ಲ. ಈ ಅಂತರವನ್ನು ನಿವಾರಿಸಲು ಎಲ್ಲ ಹಂತದ ಸರ್ಕಾರಗಳು ಒಟ್ಟಾಗಿ ಕೆಲಸ ಮಾಡಬೇಕು' ಎಂದು ಹೇಳಿದರು.

ಕಡಲೆಕಾಯಿಸಂಸ್ಕರಣಾಘಟಕಸ್ಥಾಪನೆಯ ಉದ್ದೇಶವನ್ನು ವಿವರಿಸಿದ ಅವರು, ಯಾದಗಿರಿಯಲ್ಲಿ ವರ್ಷಕ್ಕೆ ಸುಮಾರು 22,500 ಮೆಟ್ರಿಕ್ ಟನ್ ಕಡಲೆಕಾಯಿ ಉತ್ಪಾದನೆಯಾಗುತ್ತಿದ್ದು, ಮೌಲ್ಯವರ್ಧನೆಗೆ ಉತ್ತಮ ಅವಕಾಶಗಳಿವೆ. ಈಗ ನಾವು ಕಡಲೆಕಾಯಿ ಹುರಿಯುವುದು, ಎಣ್ಣೆ ಉತ್ಪಾದಿಸುವುದು ಹಾಗೂ ಪೀನಟ್ ಬಟರ್ ಸೇರಿದಂತೆ ವಿವಿಧ ಉತ್ಪನ್ನಗಳನ್ನು ತಯಾರಿಸಬಲ್ಲ ಘಟಕವನ್ನು ಸ್ಥಾಪಿಸಿದ್ದೇವೆ. ಈ ಘಟಕವನ್ನು ಯಶಸ್ವಿಯಾಗಿ ನಿರ್ವಹಿಸುತ್ತಿರುವ ಪೆದ್ದಪಲ್ಲಿ ಮಹಿಳಾ ರೈತರ ಉತ್ಪಾದಕರ ಕಂಪನಿ ಲಿಮಿಟೆಡ್‌ನ್ನು ಅವರು ಶ್ಲಾಘಿಸಿದರು.

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸ್ಥಾಪಿಸಲಾದ ಏಳು ಮೌಲ್ಯವರ್ಧನೆ ಘಟಕಗಳಲ್ಲಿ, ಯಾದಗಿರಿ ಘಟಕವನ್ನು ಮಾತ್ರ ಸಂಪೂರ್ಣವಾಗಿ ಮಹಿಳೆಯರೇ ನಿರ್ವಹಿಸುತ್ತಿದ್ದಾರೆ ಎಂದು ಅವರು ತಿಳಿಸಿದರು.

ಆದರೆ, ಘಟಕವನ್ನು ನಡೆಸುತ್ತಿರುವ ಮಹಿಳೆಯರು ರೈತರಿಂದ ನೇರವಾಗಿ ಕಡಲೆಕಾಯಿ ಖರೀದಿಸಲು ಸಮಸ್ಯೆ ಎದುರಿಸುತ್ತಿದ್ದಾರೆ ಎಂಬ ಮಾಹಿತಿ ತಮಗೆ ಲಭ್ಯವಾಗಿದೆ.

ಮಾರುಕಟ್ಟೆ ಮತ್ತು ಮಂಡಿಗಳಿಂದ ಖರೀದಿಸಲು ಮಹಿಳೆಯರು ಪ್ರಯತ್ನಿಸುತ್ತಿದ್ದು, ಈ ಉದ್ದೇಶಕ್ಕಾಗಿ ನಬಾರ್ಡ್ ವಿಶೇಷ ಅಧಿಕಾರಿಯನ್ನೂ ನೇಮಿಸಿದೆ.

ಆದರೂ ರೈತರಿಂದ ನೇರವಾಗಿ ಖರೀದಿಸುವಲ್ಲಿ ಮಧ್ಯವರ್ತಿಗಳ ಅಡ್ಡಿ ಎದುರಾಗುತ್ತಿದೆ. ಕಚ್ಚಾ ವಸ್ತುಗಳ ಖರೀದಿಯಲ್ಲಿ ಏಕೆ ಸಮಸ್ಯೆ ಎದುರಾಗುತ್ತಿದೆ ಎಂದು ಸ್ಥಳೀಯ ಆಡಳಿತವನ್ನು ಪ್ರಶ್ನಿಸಿದ ಅವರು, ಈ ಬಗ್ಗೆ ಹೊಣೆಗಾರಿಕೆ ನಿಭಾಯಿಸಬೇಕು ಎಂದು ಸೂಚಿಸಿದರು.



### ಅನಕ್ಷರತೆ, ಬಡತನ, ಅತಿ ಕಡಿಮೆ ತಲಾ ಆದಾಯ



ಅಂತೆಯೇ ಮೂಲಸೌಕರ್ಯಗಳ ಕುರಿತು ಮಾತನಾಡಿದ ಕೇಂದ್ರ ವಿತ್ತ ಸಚಿವೆ ಅವರು, ಜಿಲ್ಲೆಯಲ್ಲಿ ಶಾಲೆಗಳಿದ್ದರೂ ಶಿಕ್ಷಕರಿಲ್ಲ, ಶೌಚಾಲಯಗಳ ಕೊರತೆ ಇದೆ ಮತ್ತು ಸಾಕಷ್ಟು ತರಗತಿ ಕೊಠಡಿಗಳೂ ಇಲ್ಲ. ಜಿಲ್ಲೆಯ ಬಡತನದ ಪರಿಸ್ಥಿತಿಯನ್ನೂ ಅವರು ಉಲ್ಲೇಖಿಸಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅಧಿಕಾರಕ್ಕೆ ಬಂದ ಬಳಿಕ ಬಡತನವನ್ನು ಬಹುಆಯಾಮದ ಮಾನದಂಡಗಳ ಆಧಾರದ ಮೇಲೆ ಜಿಲ್ಲಾವಾರು ಅಳೆಯಲು ಆರಂಭಿಸಲಾಯಿತು. ವಿವಿಧ ಯೋಜನೆಗಳ ಮೂಲಕ ದೇಶದಾದ್ಯಂತ ಸುಮಾರು 25 ಕೋಟಿ ಜನರನ್ನು ಬಹುಆಯಾಮದ ಬಡತನದಿಂದ ಹೊರತರಲಾಗಿದೆ. ಆದರೂ ಈ ಎಲ್ಲ ಪ್ರಯತ್ನಗಳ ನಡುವೆಯೂ ಯಾದಗಿರಿ ಇನ್ನೂ ದೇಶದ ಅತ್ಯಂತ ಬಡ ಜಿಲ್ಲೆಗಳಲ್ಲಿ ಒಂದಾಗಿ ಉಳಿದಿದೆ ಎಂದರು.

# ಸಚಿವ ಸ್ಥಾನಕ್ಕೆ ರಾಜೀನಾಮೆಗೆ ಮುಂದಾದ ರಾಮಲಿಂಗಾರೆಡ್ಡಿ!

ಬೆಂಗಳೂರು: ನೂತನ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸಂಪುಟದಲ್ಲಿ ಸಚಿವ ಸ್ಥಾನ ಪಡೆದಿರುವ ನೂತನ ಸಚಿವರ ನಡುವೆ ಈಗ ಖಾತೆಗಾಗಿ ಫೈಟ್ ಆರಂಭವಾಗಿದ್ದು, ಬೆಂಗಳೂರು ನಗರಾಭಿವೃದ್ಧಿ ಖಾತೆಗಾಗಿ ಸಚಿವ ರಾಮಲಿಂಗಾರೆಡ್ಡಿಅವರು ಪಟ್ಟು ಹಿಡಿದಿದ್ದಾರೆ.

ಡಿಕೆ ಶಿವಕುಮಾರ್ ನೇತೃತ್ವದ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಮಾರನೇ ದಿನವೇ ಖಾತೆ ಹಂಚಿಕೆ ವಿಚಾರದಲ್ಲಿ ಅಸಮಾಧಾನ ಸ್ಫೋಟಗೊಂಡಿದ್ದು, ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡದಿದ್ದಕ್ಕೆ ಹಿರಿಯ ಸಚಿವ ರಾಮಲಿಂಗಾರೆಡ್ಡಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ನಿರ್ಧರಿಸಿದ್ದಾರೆ ಎನ್ನಲಾಗಿದೆ.



ಕಾಂಗ್ರೆಸ್‌ನ ಪ್ರಭಾವಿ ಹಾಗೂ ಹಿರಿಯ ನಾಯಕರಾಗಿರುವ ರಾಮಲಿಂಗಾರೆಡ್ಡಿ ಅವರು ಬೆಂಗಳೂರು ನಗರಾಭಿವೃದ್ಧಿ ಖಾತೆ ಮೇಲೆ ಕಣ್ಣಿಟ್ಟಿದ್ದರು. ಆದರೆ, ಅವರಿಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡದೆ ಜಲಸಂಪನ್ಮೂಲ ಖಾತೆ ಹಂಚಿಕೆ ಮಾಡಿದ್ದು, ಇದು ರಾಮಲಿಂಗಾರೆಡ್ಡಿ ಅವರ ಅಸಮಾಧಾನಕ್ಕೆ ಕಾರಣವಾಗಿದೆ. ಹೀಗಾಗಿ ಇಂದು ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ, ಕೊಟ್ಟರೆ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡಿ, ಇಲ್ಲದಿದ್ದರೇ ಸಚಿವ ಸ್ಥಾನವೇ ಬೇಡ ಎಂದು ಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ. ಅಲ್ಲದೆ ಸಚಿವ ಸ್ಥಾನಕ್ಕೆ ರಾಜೀನಾಮೆ ಸಹ ಸಲ್ಲಿಸಿದ್ದಾರೆ ಎನ್ನಲಾಗಿದೆ.

ಈಹಿಂದೆಸಿದ್ದರಾಮಯ್ಯಸರ್ಕಾರರಚನೆಸಂದರ್ಭದಲ್ಲಿಹೈಕಮಾಂಡ್ ರಾಮಲಿಂಗಾರೆಡ್ಡಿ ಅವರಿಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡಲು ನಿರ್ಧರಿಸಿತ್ತು. ಆದರೆ ಆಗಿನ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಮಲಿಂಗಾರೆಡ್ಡಿ ಅವರ ಮನವೊಲಿಸಿ ಬೆಂಗಳೂರು ನಗರಾಭಿವೃದ್ಧಿ ಖಾತೆಯನ್ನು ನಾನು ಪಡೆಯುತ್ತೇನೆ. ನಾನು ಮುಖ್ಯಮಂತ್ರಿಯಾದ ನಂತರ ಬೆಂಗಳೂರು ನಗರಾಭಿವೃದ್ಧಿ ಖಾತೆಯನ್ನು ನಿಮಗೆ ಕೊಡುತ್ತೇನೆ ಎಂದು ರಾಮಲಿಂಗಾರೆಡ್ಡಿ ಅವರಿಗೆ ಮಾತು ಕೊಟ್ಟಿದ್ದರು ಎನ್ನಲಾಗಿದೆ.

ಆದರೆ ಈಗ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡದೆ ಜಲಸಂಪನ್ಮೂಲ ಖಾತೆ ನೀಡಿರುವುದು ಹಿರಿಯ ಸಚಿವರಾದ ರಾಮಲಿಂಗಾರೆಡ್ಡಿ ಅವರಲ್ಲಿ ಬೇಸರ ಮೂಡಿಸಿದೆ. ನನಗೆ ಸಚಿವ ಸ್ಥಾನವೇ ಬೇಡ ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿ ಕೆಲಸ ಮಾಡುತ್ತೇನೆ ಎಂದು ರಾಮಲಿಂಗಾರೆಡ್ಡಿ ಅವರು ಮುಖ್ಯಮಂತ್ರಿ ಶಿವಕುಮಾರ್ ಅವರಿಗೆ ಹೇಳಿ ಸಚಿವ ಸ್ಥಾನಕ್ಕೆ ರಾಜೀನಾಮೆ ಪತ್ರವನ್ನು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಕೊಟ್ಟಿದ್ದಾರೆ ಎಂದು ಹೇಳಲಾಗಿದೆ.

## ಎಸ್‌ಐಆರ್ ಪ್ರಕ್ರಿಯೆ ವ್ಯವಸ್ಥಿತವಾಗಿ ಅನುಷ್ಠಾನಗೊಳಿಸಲು ಸಕಲ ಸಿದ್ಧತೆ । ವಿಜಯಪುರ ಜಿಲ್ಲಾಧಿಕಾರಿ ಡಾ. ಆನಂದ ಕೆ. ಹೇಳಿಕೆ

# ಎಸ್‌ಐಆರ್ ಪ್ರಕ್ರಿಯೆ ಶೇ.90 ರಷ್ಟು ಮ್ಯಾಪಿಂಗ್ ಪೂರ್ಣ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ. ಈಗಾಗಲೇ ಶೇ.90ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣಗೊಳಿಸಲಾಗಿದೆ. ಜಿಲ್ಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ಅನುಷ್ಠಾನಗೊಳಿಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ.ಕೆ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತಿಯ ಮಿನಿ ಸಭಾಂಗಣದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಸಾರ್ವಜನಿಕರಲ್ಲಿ ಯಾವುದೇ ಗೊಂದಲಗಳಾಗದಂತೆ ಪಾರದರ್ಶಕವಾಗಿ ಎಸ್.ಐ.ಆರ್ ಪ್ರಕ್ರಿಯೆ ನಡೆಲಾಗುವುದು. ಅರ್ಹ ಯಾವೊಬ್ಬ ಮತದಾರನೂ ಪಟ್ಟಿಯಿಂದ ಹೊರಗುಳಿಯಬಾರದು. ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಎಂದು ಜಿಲ್ಲಾಧಿಕಾರಿ ಹೇಳಿದರು. ಚುನಾವಣಾ ಆಯೋಗದ ಮಾರ್ಗಸೂಚಿಯಂತೆ 2002ರ ಮತದಾರರ ಪಟ್ಟಿಯನ್ನು ಮಾನದಂಡವಾಗಿಟ್ಟುಕೊಂಡು ಪ್ರಸ್ತುತ ಇರುವ 2025ರ ಮತದಾರರ ಪಟ್ಟಿಯೊಂದಿಗೆ ಹೋಲಿಕೆ ಹಾಗೂ ಮ್ಯಾಪಿಂಗ್ ಪ್ರಕ್ರಿಯೆ ನಡೆಸಲಾಗಿದೆ ಎಂದರು.

ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಜಿಲ್ಲೆಯಲ್ಲಿ ಈಗಾಗಲೇ ಶೇ.90ರಷ್ಟು ಮ್ಯಾಪಿಂಗ್ ಆಗಿದೆ ಎಂದರು. ವಿಶೇಷ ಪರಿಷ್ಕರಣೆ ಅಂಗವಾಗಿ ಜೂನ್ 20 ರಿಂದ 29ರವರೆಗೆ ಪೂರ್ವಸಿದ್ಧತೆ, ತರಬೇತಿ ಮತ್ತು ಮುದ್ರಣ ಕಾರ್ಯಗಳು ನಡೆಯಲಿವೆ. ಜೂನ್ 30 ರಿಂದ ಜುಲೈ 29 ರವರೆಗೆ ಬಿ.ಎಲ್.ಓ.ಗಳು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಹಾಗೂ ಪರಿಶೀಲನೆ ನಡೆಸಲಿದ್ದಾರೆ. ತದನಂತರ ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದರು.

ಆಗಸ್ಟ್ 5ರಿಂದ ಅಕ್ಟೋಬರ್ 3ರವರೆಗೆ ನೋಟಿಸ್ ಹಂತ ಹಾಗೂ ಹಕ್ಕು ಮತ್ತು ಆಕ್ಷೇಪಣೆಗಳನ್ನು ವಿಲೇವಾರಿ ಮಾಡಲಾಗುವುದು ಎಂದರು. ಅಕ್ಟೋಬರ್.7 ರಂದು ಮತದಾರರ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದರು. ಈ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಮಾಧ್ಯಮಗಳು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿಗಳು ಕೋರಿದರು.

2092 ಬಿಎಲ್‌ಒಗಳು: ವಿಜಯಪುರ ಜಿಲ್ಲೆಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ತೊಡಗಿಸಿಕೊಳ್ಳುವ ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಮತ್ತು ಬಿಎಲ್‌ಒಗಳ ಮೇಲ್ವಿಚಾರಕರ ವಿವರ ಆಯಾ ವಿಧಾನಸಭಾವಾರು ವಿವರ ನೀಡಿದರು. ಮುದ್ದೇಬಿಹಾಳ ಮತಕ್ಷೇತ್ರದಲ್ಲಿ ಒಟ್ಟು 246 ಮತಗಟ್ಟೆಗಳಿದ್ದು, 246 ಬಿಎಲ್‌ಒಗಳು ಹಾಗೂ 20 ಬಿಎಲ್ ಒಗಳ ಮೇಲೆ ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ ಎಂದರು.

ದೇವರಹಿಪ್ಪರಗಿ ವಿಧಾನಸಭಾ ಮತಕ್ಷೇತ್ರದಲ್ಲಿ ಒಟ್ಟು 252 ಮತಗಟ್ಟೆಗಳಿಗೆ252ಬಿಎಲ್‌ಒಗಳಿದ್ದು,ಅವರಿಗೆ23ಜನಮೇಲ್ವಿಚಾರಕರಿದ್ದಾರೆ. ಬಸವನಬಾಗೇವಾಡಿ ವಿಧಾನಸಭಾ ಮತಕ್ಷೇತ್ರದಲ್ಲಿ 231 ಮತಗಟ್ಟೆಗಳಿಗೆ 231 ಬಿಎಲ್‌ಒಗಳಿದ್ದು, 21 ಮೇಲ್ವಿಚಾರಕರಿದ್ದಾರೆ. ಬಬಲೇಶ್ವರ ಮತಕ್ಷೇತ್ರದಲ್ಲಿ ಒಟ್ಟು 244 ಮತಗಟ್ಟೆಗಳಿದ್ದು, 244 ಬಿಎಲ್ ಒಗಳು ಕಾರ್ಯನಿರ್ವಹಿಸಲಿದ್ದು, ಇವರ ಮೇಲೆ 23 ಮೇಲ್ವಿಚಾರಕರಿದ್ದಾರೆ. ವಿಜಯಪುರ ನಗರ ಮತಕ್ಷೇತ್ರದಲ್ಲಿ ಒಟ್ಟು 285 ಮತಗಟ್ಟೆಗಳಿದ್ದು, 285 ಬಿಎಲ್ ಓಗಳಿಗೆ 28 ಮೇಲ್ವಿಚಾರಕರು ಉಸ್ತುವಾರಿ ನೋಡಿಕೊಳ್ಳಲಿದ್ದಾರೆ ಎಂದು ಜಿಲ್ಲಾಧಿಕಾರಿಗಳು ವಿವರಿಸಿದರು.ನಾಗಠಾಣ ವಿಧಾನಸಭೆ ಕ್ಷೇತ್ರದಲ್ಲಿ 299 ಮತಗಟ್ಟೆಗಳಿದ್ದು,299 ಬಿಎಲ್‌ಒಗಳಿಗೆ 30 ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ ಎಂದರು. ಇಂಡಿ ಮತಕ್ಷೇತ್ರದಲ್ಲಿ 268 ಮತಗಟ್ಟೆಗಳಿದ್ದು, 268 ಬಿಎಲ್‌ಒಗಳು ಹಾಗೂ 33 ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ. ಸಿಂದಗಿ ಮತಕ್ಷೇತ್ರದಲ್ಲಿ ಒಟ್ಟು 267 ಮತಗಟ್ಟೆಗಳಿದ್ದು, 267 ಬಿಎಲ್ ಒಗಳು ಹಾಗೂ 21 ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ. ಒಟ್ಟಾರೆ ಜಿಲ್ಲೆಯಲ್ಲಿ ಒಟ್ಟು 2092 ಮತಗಟ್ಟೆಗಳಿಗೆ 2092 ಬಿಎಲ್ ಒಗಳಿದ್ದು, ಅವರ ಮೇಲೆ 199 ಜನ ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ ಎಂದರು.

ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಜಿಲ್ಲೆಯ ಮತದಾರರ ವಿವರ ಆಯಾ ವಿಧಾನಸಭಾವಾರು: ಮುದ್ದೇಬಿಹಾಳ ಮತಕ್ಷೇತ್ರದಲ್ಲಿ ಒಟ್ಟು 246 ಮತಗಟ್ಟೆಗಳಿದ್ದು, 1,1,4252 ಗಂಡು, 1,14,527 ಮಹಿಳೆಯರು ಇತರೇ 32 ಸೇರಿ ಒಟ್ಟು 2,28,811 ಮತದಾರರಿದ್ದಾರೆ. ದೇವರಹಿಪ್ಪರಗಿ ಮತಕ್ಷೇತ್ರದಲ್ಲಿ ಒಟ್ಟು 252 ಮತಗಟ್ಟೆಗಳ ಸಂಖ್ಯೆಯಿದ್ದು, 1,17,478 ಪುರುಷರು, 1,13,818 ಮಹಿಳೆಯರು 29 ಇತರೇ ಸೇರಿ ಒಟ್ಟು 2,31,325 ಮತದಾರರಿದ್ದಾರೆ ಎಂದು ಜಿಲ್ಲಾಧಿಕಾರಿಗಳು ವಿವರಿಸಿದರು.

ಬಸವನಬಾಗೇವಾಡಿ ಮತಕ್ಷೇತ್ರದಲ್ಲಿ ಒಟ್ಟು 231 ಮತಗಟ್ಟೆಗಳಿದ್ದು, 1,11,891 ಪುರುಷರು, 1,10,456 ಮಹಿಳೆಯರು, ಇತರೇ 22 ಸೇರಿ ಒಟ್ಟು 2,22,369 ಮತದಾರರಿದ್ದಾರೆ. ಬಬಲೇಶ್ವರದಲ್ಲಿ ಒಟ್ಟು 244 ಮತಗಟ್ಟೆಗಳಿದ್ದು, 1,13,803 ಪುರುಷರು, 1,12,025 ಮಹಿಳೆಯರು, ಇತರೇ 10 ಸೇರಿ ಒಟ್ಟು 2,25,838 ಮತದಾರರಿದ್ದಾರೆ. ವಿಜಯಪುರ ನಗರ ಮತಕ್ಷೇತ್ರದಲ್ಲಿ ಒಟ್ಟು 285 ಮತಗಟ್ಟೆಗಳಿದ್ದು, 1,43,010 ಪುರುಷರು, 1,49,080 ಮಹಿಳೆಯರು, ಇತರೇ 89 ಸೇರಿ 2,92,179 ಮತದಾರರಿದ್ದಾರೆ. ನಾಗಠಾಣದಲ್ಲಿ 299 ಮತಗಟ್ಟೆಗಳಿದ್ದು, 1,42,148 ಪುರುಷರು, 1,37,031 ಮಹಿಳೆಯರು, ಇತರೇ 12 ಸೇರಿ 2,79,191 ಮತದಾರರಿದ್ದಾರೆ. ಇಂಡಿ ಮತಕ್ಷೇತ್ರದಲ್ಲಿ 268 ಮತಗಟ್ಟೆಗಳಿದ್ದು, 1,30,863 ಪುರುಷರು, 1,24,455 ಮಹಿಳೆಯರು, ಇತರೇ 20 ಸೇರಿ ಒಟ್ಟು 2,55,338 ಮತದಾರರಿದ್ದಾರೆ. ಸಿಂದಗಿ ಮತಕ್ಷೇತ್ರದಲ್ಲಿ 267 ಮತಗಟ್ಟೆಗಳಿದ್ದು, 1,27,360 ಪುರುಷರು, 1,23,295 ಮಹಿಳೆಯರು, ಇತರೇ 34 ಸೇರಿ 2,50,689 ಮತದಾರರಿದ್ದಾರೆ.

ಜಿಲ್ಲೆಯ ಒಟ್ಟು 2092 ಮತಗಟ್ಟೆಗಳಿದ್ದು, 10,00,805 ಪುರುಷರು, 9,84,687 ಮಹಿಳೆಯರು ಇತರೇ 248 ಸೇರಿ ಒಟ್ಟು 1,9,85,740 ಮತದಾರರಿದ್ದಾರೆ ಎಂದು ಜಿಲ್ಲಾಧಿಕಾರಿಗಳು ವಿವರಿಸಿದರು.

ಚುನಾವಣಾ ಆಯೋಗದ ಃಣಣಥಿ://ತಿತಿಣಜಥಿ.ಜಛಿ.ರಿಠ.ಟ (ಗಿಂಣಜಡಿ ಖಜಡಿತುಛಿಜ ಕಂಡಿಣಚಿಟ) ಹಾಗೂ ಮುಖ್ಯ ಚುನಾವಣಾಧಿಕಾರಿಗಳ ಕರ್ನಾಟಕ ಇವರ ಅಜಠಿಇಚಿಡಿಟಿಚಿಣಚಿಞಚಿ-ಇಚಿ.ರಿಠ.ಟ ಅಂತರ ಜಾಲ ತಾಣ ಸರ್ಚ್ ಮಾಡಿ ಮಾಹಿತಿ ಮತ್ತು ದಾಖಲೆಗಳನ್ನು ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.



ಎಸ್ ಐಆರ್-2026ಕ್ಕೆ ಲಾಗಿನ್ ಆಗಿ ಬುಕ್ ಎ ಕಾಲ್ ರಿಕ್ವೆಸ್ಟ್ ವಿತ್ ಬಿಎಲ್ ಒ ಲಾಗಿನ್ ಆಗಿ ಸೈನ್ ಅಪ್ ಮಾಡಬೇಕು. ಬಳಿಕ ಎಸ್‌ಐಆರ್ 2026ರಲ್ಲಿ ನಿಮ್ಮ ಹೆಸರು ಹುಡುಕಿ- ರೋಲ್‌ಗೆ ಹೋಗಿ, ಅಲ್ಲಿ ಎಪಿಕ್ ನಂಬರ್, ಮೊಬೈಲ್ ನಂಬರ್ ಹಾಗೂ ಒಟಿಪಿ ದಾಖಲಿಸಿ, ಆಗ 2002ರ ಮತದಾರರ ಪಟ್ಟಿಯನ್ನು ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ. ಮತದಾರರ ಪಟ್ಟಿಯ ಕ್ರಮ ಸಂಖ್ಯೆ ಮತ್ತು ಮತಗಟ್ಟೆ ಸಂಖ್ಯೆ, ಮತ್ತು ಹೆಸರು, ಮತಗಟ್ಟೆ ಅಧಿಕಾರಿಯ ಹೆಸರು ಮತ್ತು ಮೊಬೈಲ್ ನಂ. ಮತ್ತು ಮತದಾರರ ನೋಂದಣಾಧಿಕಾರಿಯ ಹೆಸರು ಮತ್ತು ಮೊಬೈಲ್ ಸಂಖ್ಯೆ ಪಡೆಯಬಹುದಾಗಿದೆ. ಮತಗಟ್ಟೆ ಅಧಿಕಾರಿಯನ್ನು ಸಂಪರ್ಕಿಸಲು ವಿನಂತಿ ದಾಖಲಿಸಿ, ಅವರಿಂದ ಅವಶ್ಯಕ ಮಾಹಿತಿ ಪಡೆಯಬಹುದಾಗಿದೆ ಎಂದವರು ತಿಳಿಸಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಕಾರ್ಯದ ಸಲುವಾಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ನಂಬರ್: 1950 ಕೇಂದ್ರ ಸ್ಥಾಪಿಸಲಾಗಿದೆ. ಸಾರ್ವಜನಿಕರು ಈ ಕೇಂದ್ರದ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದರು.

ಈ ವಿಶೇಷ ಪ್ರಕ್ರಿಯೆಯಲ್ಲಿ ಬಿಎಲ್ ಓಗಳ ಪಾತ್ರ ಅತ್ಯಂತ ಪ್ರಮುಖವಾಗಿದೆ. ಇದರಲ್ಲಿ ಸಕ್ರಿಯವಾಗಿ ಭಾಗವಹಿಸಲು ಮತ್ತು ಪಾರದರ್ಶಕತೆಯನ್ನು ಖಚಿತಪಡಿಸಲು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳು ಪ್ರತಿಯೊಂದೂ ಮತಗಟ್ಟೆಗೆ ಬೂತ್ ಮಟ್ಟದ ಏಜೆಂಟರನ್ನು ನೇಮಕ ಮಾಡುವಂತೆ ರಾಜಕೀಯ ಪಕ್ಷಗಳಿಗೆ ತಿಳಿಸಲಾಗಿದೆ ಎಂದರು. ವಿಶೇಷ ಸಮಗ್ರ ಪರಿಷ್ಕರಣೆಯು ಮತದಾರರು, ರಾಜಕೀಯ ಪಕ್ಷಗಳು ಹಾಗೂ ಚುನಾವಣಾ ಆಯೋಗದ ಎಲ್ಲ ಹಂತದ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಒಳಗೊಂಡಿರುವ ಪಾರದರ್ಶಕ ಪ್ರಕ್ರಿಯೆಯಾಗಿದ್ದು, ಪರಿಷ್ಕರಣೆ ಪ್ರಕ್ರಿಯೆ ವೇಳೆ ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು (ಎನ್ಯುಮರೇಶನ್) ವಿತರಣೆ ಹಾಗೂ ಸಂಗ್ರಹ ಕಾರ್ಯವನ್ನು ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಇಆರ್‌ಓಗಳ ಸಂಪರ್ಕ: ಮುದ್ದೇಬಿಹಾಳ ಇಆರ್‌ಓ ಬದ್ರುದ್ದೀನ್ ಸೌದಾಗರ, ಮೊ.9448392005, ದೇವರಹಿಪ್ಪರಗಿ ಇಆರ್‌ಓ ಚಿದಾನಂದ ಗುರುಸ್ವಾಮಿ, ಮೊ.9483966271, ಬಸವನಬಾಗೇವಾಡಿ ಇಆರ್‌ಓ ಎಂ.ಬಿ. ನಾಗಠಾಣ, ಮೊ.9448426549, ಬಬಲೇಶ್ವರ ಇಆರ್‌ಓ ಗುರುನಾಥ ದಡ್ಡೆ, ಮೊ.9599909724, ವಿಜಯಪುರ ನಗರದ ಇಆರ್‌ಓ ವಿಜಯ ಮೆಕ್ಕಳಕಿ, ಮೊ.9739582619, ನಾಗಠಾಣ ಇಆರ್‌ಓ ರಾಜಶೇಖರ ಡಂಬಳ, ಮೊ.9902581988, ಇಂಡಿ ಇಆರ್‌ಓ ಚಿದಾನಂದ ಗುರುಸ್ವಾಮಿ, ಮೊ.9483966271, ಸಿಂದಗಿ ಇಆರ್‌ಓ ವಿನಯಕುಮಾರ ಪಾಟೀಲ, ಮೊ.8951420399 ಅವರನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಎಇಆರ್‌ಓ ವಿವರ: ಮುದ್ದೇಬಿಹಾಳ ಮತಕ್ಷೇತ್ರಕ್ಕೆ ಕೀರ್ತಿ ಚಾಲಕ್, ಎ.ಡಿ. ಅಮರವಾಡಗಿ ಹಾಗೂ ವಿನಯ ಹೂಗಾರ ಅವರನ್ನು ನೇಮಕ ಮಾಡಲಾಗಿದೆ. ದೇವರಹಿಪ್ಪರಗಿ ಮತಕ್ಷೇತ್ರಕ್ಕೆ ನಿಂಗಪ್ಪ ಬಿರಾದಾರ, ವೈ.ಎಸ್. ಸೋಮನಕಟ್ಟಿ, ಎ.ಡಿ. ಅಮರವಾಡಗಿ ಹಾಗೂ ವಿನಯ ಹೂಗಾರ ಅವರನ್ನು ನೇಮಕ ಮಾಡಲಾಗಿದೆ. ಬಸವನಬಾಗೇವಾಡಿಗೆ ವೈ.ಎಸ್. ಸೋಮನಕಟ್ಟಿ, ಸಂತೋಷ ಮ್ಯಾಗೇರಿ, ಎ.ಡಿ. ಅಮರವಾಡಗಿ ಅವರನ್ನು ನೇಮಕ ಮಾಡಲಾಗಿದೆ. ಬಬಲೇಶ್ವರ ಮತಕ್ಷೇತ್ರಕ್ಕೆ ಶಾಂತಲಾ ಚಂದನ್, ಪ್ರಶಾಂತ ಚನಗೊಂಡ, ಸುರೇಶ ಚವಲಾರ ಅವರನ್ನು ನೇಮಕ ಮಾಡಲಾಗಿದೆ. ವಿಜಯಪುರ ನಗರ ಮತಕ್ಷೇತ್ರಕ್ಕೆ ಯು.ಎಸ್. ಗುಡ್ಡದ, ಸುರೇಶ ಚವಲಾರ ಅವರನ್ನು ನೇಮಕ ಮಾಡಲಾಗಿದೆ, ನಾಗಠಾಣಕ್ಕೆ ಪ್ರಶಾಂತ ಚನಗೊಂಡ ಹಾಗೂ ಎಸ್.ಬಿ. ಇಂಗಳೆ ಅವರನ್ನು ನೇಮಕ ಮಾಡಲಾಗಿದೆ. ಇಂಡಿಗೂ ಎಸ್.ಬಿ. ಇಂಗಳೆ ಅವರನ್ನು ನೇಮಕ ಮಾಡಲಾಗಿದೆ. ಸಿಂದಗಿ ಮತಕ್ಷೇತ್ರಕ್ಕೆ ಕರೆಪ್ಪ ಬೆಳ್ಳಿ, ಬಿ.ಎಸ್. ಕಡಕಬಾವಿ, ಕರೆಪ್ಪ ಬೆಳ್ಳಿ ಅವರನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ವಿವರಿಸಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಹಾಗೂ ವಿಜಯಪುರ ತಹಶೀಲ್ದಾರ ಪ್ರಶಾಂತ ಚನಗೊಂಡ, ಜಿಲ್ಲಾಧಿಕಾರಿ ಕಚೇರಿಯ ಸಚ್ಚಿದಾನಂದ ತೇರದಾಳ ಉಪಸ್ಥಿತರಿದ್ದರು.

### ಅಕ್ಟೋಬರ್ 7 ರಂದು ಅಂತಿಮ ಮತಪಟ್ಟಿ ಪ್ರಕಟ

ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಲಾಗುವುದು. ನೋಟೀಸ್ ಹಂತ ಹಾಗೂ ಹಕ್ಕು ಮತ್ತು ಆಕ್ಷೇಪಣೆ ವಿಲೇವಾರಿ ಆಗಸ್ಟ್ 5 ರಿಂದ 03 ಅಕ್ಟೋಬರವರೆಗೆ ಕಾಲಾವಕಾಶ ನೀಡಲಾಗಿದೆ. ಸಾರ್ವಜನಿಕರು ಆಕ್ಷೇಪಣೆಗಳನ್ನು ಸಲ್ಲಿಸಬಹುದು. ಸಾರ್ವಜನಿಕರಿಂದ ಬರುವ ಆಕ್ಷೇಪಣೆಗಳ ಇತ್ಯರ್ಥ-ವಾದ ಬಳಿಕ ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ವಿವರಿಸಿದರು.

### ಮನೆ ಗಣತಿ ಸಹಕಾರಕ್ಕೆ ಕೋರಿಕೆ

ಪ್ರತಿಯೊಬ್ಬ ಮತದಾರರ ಮನೆ ಬಾಗಿಲಿಗೆ ಬಿಎಲ್‌ಒಗಳ ಮೂಲಕ ಗಣತಿ ನಮೂನೆ ತಲುಪಿಸಲಾಗುವುದು. ಇದರಲ್ಲಿ ಮತದಾರರ ಹೆಸರು, ಎಪಿಕ್ ಸಂಖ್ಯೆ, ಸಂಬಂಧಿಕರ ಹೆಸರು ಹಾಗೂ ವಿಧಾನಸಭಾ ಕ್ಷೇತ್ರದ ವಿವರಗಳು ಇರಲಿವೆ. ಬಿಎಲ್‌ಒಗಳು ಮನೆಗಳಿಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಿ, ಗಣತಿ ನಮೂನೆಗಳನ್ನು ತಲುಪಿದ ನಂತರ ವಿವರಗಳ ಸರಿಯಾಗಿವೆಯೇ ಎಂಬುದನ್ನು ಮತದಾರರಿಂದ ದೃಢೀಕರಿಸಿಕೊಂಡು ಸಹಿ ಪಡೆದು ವಾಪಸ್ ತರಲಿದ್ದಾರೆ ಎಂದರು.

ಸಾರ್ವಜನಿಕರು ಗಣತಿ ನಮೂನೆ ಸ್ವೀಕರಿಸಿ, ಪರಿಶೀಲಿಸಿ ಕಡ್ಡಾಯವಾಗಿ ಬಿಎಲ್‌ಒಗಳಿಗೆ ವಾಪಸ್ ನೀಡಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.



# ರೈತ ಸಂಘ ತಾಲೂಕಾಧ್ಯಕ್ಷರಾಗಿ ನಂದು ಮಾಗಿ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ

ನಿಡಗುಂದಿ: ಇಟಗಿ ಗ್ರಾಮದಲ್ಲಿ ನಡೆದ ಅಖಂಡ ಕರ್ನಾಟಕ ರೈತ ಸಂಘದ ಗ್ರಾಮ ಶಾಖೆ ಉದ್ಘಾಟನಾ ಸಮಾರಂಭದಲ್ಲಿ ನಿಡಗುಂದಿ ತಾಲೂಕು ನೂತನ ಅಧ್ಯಕ್ಷರಾಗಿ ನಂದು ಮಾಗಿ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಉಮೇಶ ವಾಲೀಕಾರ ತಿಳಿಸಿದ್ದಾರೆ.

ನೂತನ ಅಧ್ಯಕ್ಷರಿಗೆ ಪ್ರಮಾಣ ವಚನ ಬೋಧಿಸಿ ಆದೇಶ ಪತ್ರ ನೀಡಿ ಮಾತನಾಡಿದ ಅವರು, "ಸಂಘದ ತತ್ವ-ಸಿದ್ಧಾಂತಗಳಿಗೆ ಬದ್ಧರಾಗಿ, ಸಂಘಕ್ಕೆ ಚ್ಯುತಿ ಬರದಂತೆ ಪ್ರಾಮಾಣಿಕತೆಯಿಂದ ಸಂಘಟನೆ ಮುನ್ನಡೆಸಬೇ



# ನೂತನ ಡಿಡಿಪಿಯು ಉಪ್ಪಾರ ರಿಗೆ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ

ಕಲಕೇರಿ: ಗ್ರಾಮದ ಮಲ್ಲಿಕಾರ್ಜುನ ವಿಧ್ಯಾವರ್ಧಕ ಸಂಘದ ಅಡಿಯಲ್ಲಿ ನಡೆಯುತ್ತಿರುವ ಶ್ರೀ ಬಸವೇಶ್ವರ ಪದವಿ ಪೂರ್ವ ಕಾಲೇಜಿನ ವತಿಯಿಂದ ನೂತನ ಡಿಡಿಪಿಯು ಆಗಿ ಆಧಿಕಾರ ಸ್ವೀಕರಿಸಿದ ಶ್ರೀಯುತ ಕೆ ಎ ಉಪ್ಪಾರ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಪ್ರಭಾರಿ ಪ್ರಾಚಾರ್ಯ ರವಿಕುಮಾರ ಗುಮಶೆಟ್ಟಿ,ಉಪನ್ಯಾಸಕ ಬಿ ಎಂ ಕುಂಭಾರ, ದ್ವಿದಸ ಈರಣ್ಣ ಝುಳಕಿ ಸೇರಿದಂತೆ ಇತರರು ಇದ್ದರು.




# 60 ದಿನಗಳ ಬೇಸಿಗೆ ತರಬೇತಿ ಶಿಬಿರ ಮುಕ್ತಾಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಲೋಕ ಕಲ್ಯಾಣ ಪ್ರಾಥಮಿಕ ಶಾಲೆ ಗೋಳಗುಮ್ಮಟ ಹಿಂದುಗಡೆ ಡಾಲರ್ಸ್ ಕಾಲನಿ ಹತ್ತಿರ ಇರುವ ಶಾಲೆಯ ಆವರಣದಲ್ಲಿ ಶಿಬಿರ ಮುಕ್ತಾಯವಾಯಿತು. ಈ ಶಿಬಿರದಲ್ಲಿ ಒಟ್ಟು 150 ವಿದ್ಯಾರ್ಥಿಗಳಿಗೆ ಯೋಗ ಮತ್ತು ಕರಾಟೆ ತರಬೇತಿಯು ಕೊನೆಗೊಂಡಿತು.

ಈ ಸಂದರ್ಭದಲ್ಲಿ ಶಾಲೆಯ ಅಧ್ಯಕ್ಷರಾದ ದಾನಪ್ಪ ಸೂರಗೊಂಡ, ಆಡಳಿತಾಧಿಕಾರಿ ಪ್ರಭು ಕೋಟ್ಯಾಳ, ಮುಖ್ಯ ಗುರು ದಯಾಸಾಗರ ಸೂರಗೊಂಡ ಹಾಗೂ ದೈಹಿಕ ಶಿಕ್ಷಕಿ ಶ್ರೀಮತಿ ಅನಿತಾ ರಜಪುತ, ಶಿಕ್ಷಕರಾದ ಎ.ಎಸ್. ಬಾಸಿಂಗಿ, ಯೋಗ ಮತ್ತು ಕರಾಟೆ ತರಬೇತಿದಾರರಾದ ಬಸವರಾಜ ಎನ್ ಬಾಗೇವಾಡಿ ಹಾಗೂ ಶಾಲೆಯ ಸಿಬ್ಬಂದಿ ವರ್ಗದವರು ಮಕ್ಕಳೊಂದಿಗೆ ಹಾಜರಾಗಿದ್ದರು.



# ಪರಿಸರ ರಕ್ಷಕ ಪ್ರಶಸ್ತಿಗೆ ಐವರ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪಟ್ಟಣದ ಹಸಿರು ತೋರಣ ಗೆಳೆಯರ ಬಳಗ ಕೊಡಮಾಡುವ ಪರಿಸರ ರಕ್ಷಕ ಪ್ರಶಸ್ತಿಗೆ ಐವರನ್ನು ಆಯ್ಕೆ ಮಾಡಲಾಗಿದೆ.

ಮಿಥುನ ನೇಮಪ್ಪ ಚವ್ಹಾಣ ಅಡವಿ ಹುಲಗಬಾಳ (ಪ್ರಾದೇಶಿಕ ಅರಣ್ಯ), ಸಂಗಪ್ಪ ನಂದಪ್ಪ ನಾಗಾವಿ ಕಾರಕೂರ (ಸಾಮಾಜಿಕ ಅರಣ್ಯ), ಮಾನಪ್ಪ ಸಂಜೀವಪ್ಪ ಕರಡಿ ಆನೇಹೊಸೂರ (ಕೆಬಿಜೆಎನ್ನೆಎಲ್ ಅರಣ್ಯ), ರಾಮಣ್ಣ ಪರಪ್ಪಗೋಳ (ಸಂತ ಕನಕದಾಸ ಶಾಲೆ ಮುದ್ದೇಬಿಹಾಳ) ಹಾಗೂ ತಂಗಡಗಿ ಸರ್ಕಾರಿ ಪ್ರೌಢಶಾಲೆಯ ದೈಹಿಕ ಶಿಕ್ಷಕರಾದ ವಿಠ್ಠಲ ತೆಗ್ಗಿ ಪ್ರಶಸ್ತಿಗೆ ಆಯ್ಕೆಯಾದವರು.

ಜೂ.7 ಬೆ8 ಗಂಟೆಗೆ ಪಟ್ಟಣದ ಹುಡ್ಕೋ ಬಡಾವಣೆಯಲ್ಲಿರುವ ಉದ್ಯಾನವನದಲ್ಲಿ ನಡೆಯುವ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿಗಳನ್ನು ನೀಡಿ ಸನ್ಮಾನಿಸಿ ಗೌರವಿಸಲಾಗುವದು ಎಂದು ಹಸಿರು ತೋರಣ ಗೆಳೆಯರ ಬಳಗದ ಅಧ್ಯಕ್ಷರಾದ ಅಮರೇಶ ಗೂಳಿ, ಕಾರ್ಯದರ್ಶಿ ಬಸವರಾಜ ಬಿಜ್ಜೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಠ್ಠಲ ಕಟಕಧೋಂಡ ಗೆ ಸಚಿವ ಸ್ಥಾನ ನೀಡಲು ಮುಲ್ಲಾ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ನಾಗಠಾಣ ಮತಕ್ಷೇತ್ರ ಅಭಿವೃದ್ಧಿ ಕ್ಷೇತ್ರ ವಾಗಬೇಕೆಂದರೆ ನಾಗಠಾಣ ಶಾಸಕರಾದ ವಿಠ್ಠಲ ಕಟಕಧೋಂಡ ಅವರಿಗೆ ಸಚಿವ ಸ್ಥಾನದ ಅಧಿಕಾರ ಕೊಟ್ಟಾಗ ಮಾತ್ರ ಸಾಧ್ಯವಾಗಲಿದೆ, ಆ ನಿಟ್ಟಿನಲ್ಲಿ ಶಾಸಕ ವಿಠ್ಠಲ ಕಟಕಧೋಂಡ ಅವ-ರಿಗೆ ನೂತನ ಮುಖ್ಯಮಂತ್ರಿ ಡಿ.ಕೆ ಶಿವುಕುಮಾರ ಅವರ ಮಂತ್ರಿ ಮಂಡಲದಲ್ಲಿ ಸಚಿವ ಸ್ಥಾನದ ಅವಕಾಶ ನೀಡಿ ಎಂದು ಕಾಂಗ್ರೆಸ್ ಧುರಿಣ ವಾಸಿಮ್ ಮುಲ್ಲಾ ಒತ್ತಾಯಿಸಿದ್ದಾರೆ.

ನಾಗಠಾಣ ಮತಕ್ಷೇತ್ರಕ್ಕೆ ಇಲ್ಲಿಯ ವರೆಗೆ ಸಚಿವ ಸ್ಥಾನ ಸಿಕ್ಕಿಲ್ಲ. ನೂತನ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ ಅವರು ನಾಗಠಾಣ ಮತಕ್ಷೇತ್ರಕ್ಕೆ ಸಚಿವ ಸ್ಥಾನ ನೀಡಿದರೆ ಕರ್ನಾಟಕ ಹಾಗೂ ನಾಗಠಾಣ ಕ್ಷೇತ್ರದ ಇತಿಹಾಸದ ಪುಟದಲ್ಲಿ ನೀವು ಶಾಶ್ವತವಾಗಿ ಉಳಿಯಲಿದ್ದಿರಿ ಎಂದು ಚಡಚಣ ಪಟ್ಟಣದ ಕಾಂಗ್ರೆಸ್ ಧುರಿಣ ವಾಸಿಮ್ ಮುಲ್ಲಾ ಅವರು ಶಾಸಕ ವಿಠ್ಠಲ. ಧೋ ಕಟಕಧೋಂಡ ಅವರಿಗೆ ಸಚಿವ ಸ್ಥಾನ ನೀಡುವಂತೆ ಮುಖ್ಯಮಂತ್ರಿ ಹೈಕಮಾಂಡಗೆ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ನವರಿಗೂ ಮನವಿ ಮಾಡಿದ್ದಾರೆ.

# "ಇವನಾರವ ಇವನಾರವ ಎಂದೆನ್ನದೆ, ಇವ ನಮ್ಮವ ಇವ ನಮ್ಮವ.." ಎಂದೆನ್ನುತ ಸರ್ವರನ್ನೂ ಅಪ್ಪಿಕೊಳ್ಳುವ ಸಹೃದಯತೆಯ ಧೀಮಂತ

# ಸಾಮಾಜಿಕ ಬದ್ಧತೆಯ ಅವಿಶ್ರಾಂತ ಕೆಲಸಗಾರ ಎಂ.ಬಿ.ಪಾಟೀಲ

■ ಉದಯರಶ್ಮಿ ದಿನಪತ್ರಿಕೆ

**ವ್ಯಕ್ತಿ - ವ್ಯಕ್ತಿತ್ವ (ಸಾಧಕರ ಬದುಕಿನ ಪುಟಗಳು)**

ಪಾದರಸದಂತೆ ಓಡಾಟ, ಸ್ನೇಹ ಪರತೆ, ಚಾಣಾಕ್ಷ ಮುನ್ನಡೆ, ಸಾಮಾಜಿಕ ಬದ್ಧತೆಯ ಅವಿಶ್ರಾಂತ ಕೆಲಸಗಾರ ಮಲ್ಲನಗೌಡ ಬಸನಗೌಡ ಪಾಟೀಲ್ ರವರು.

ಮಾಜಿ ಸಚಿವ, ಶಿಕ್ಷಣ ಪ್ರೇಮಿ, ಸೋಲರಿಯದ ಸರದಾರ ನಿರಂತರ 25ವರ್ಷಗಳ ಕಾಲ ಕರ್ನಾಟಕ ಶಾಸನ ಸಭೆ ಸದಸ್ಯರಾಗಿದ್ದ ದಿ.ಬಿ.ಎಂ.ಪಾಟೀಲ್‌ರ ಜೇಷ್ಠ ಸುಪುತ್ರರಾಗಿರುವ ಎಂ.ಬಿ.ಪಾಟೀಲ್ ವಿಜಯಪುರದಲ್ಲಿ 7 ಅಕ್ಟೋಬರ 1964 ರಂದು ಜನಿಸಿ, ಬೆಂಗಳೂರು, ವಿಜಯಪುರದಲ್ಲಿ ತಮ್ಮ ಶಿಕ್ಷಣ ಪಡೆದು 1991 ರಲ್ಲಿ ಆಗ ತಾನೇ ಬಿ.ಇ. ಸಿವಿಲ್ ಪದವಿ ಪಡೆದ ನವತರುಣ.

ತಂದೆಯವರ ಅಕಾಲಿಕ ನಿಧನದ ನಂತರ ಅವರು ಮುನ್ನಡೆಸಿದ ಬಿಜಾಪುರ ಲಿಂಗಾಯತ ಶಿಕ್ಷಣ ಸಂಸ್ಥೆಯ ನೇತೃತ್ವ ವಹಿಸಿಕೊಂಡು ಹಾಗೂ ತಂದೆಯವರ ನಿಧನದ ಹಿನ್ನಲೆಯಲ್ಲಿ ತೆರವಾದ ತಿಕೋಟಾ ವಿಧಾನಸಭೆಯ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಚುನಾಯಿತರಾಗಿ ತಮ್ಮ 26ನೇ ವಯಸ್ಸಿನಲ್ಲಿ (1991-1994) ಶಾಸಕರಾದರು.

ನಂತರ 1998 ರಲ್ಲಿ ವಿಜಯಪುರದಿಂದ ಲೋಕಸಭೆ ಸದಸ್ಯರಾಗಿ ಆಯ್ಕೆಗೊಂಡರು.

2004ರಲ್ಲಿ ತಿಕೋಟಾ ಕ್ಷೇತ್ರದಿಂದ ಶಾಸಕರಾದರು. ಹಿಂದುಳಿದ ವಿಜಯಪುರ ಜಿಲ್ಲೆಯನ್ನು ಅಭಿವೃದ್ಧಿ ಪಡಿಸಬೇಕೆಂಬ ಇವರ ಕನಸು ನನಸು ಮಾಡಲು ತಮ್ಮ ಸಂಸ್ಥೆಯ ಇಂಜನಿಯರಿಂಗ್ ಕಾಲೇಜಿನಿಂದ ರಾಷ್ಟ್ರದಲ್ಲಿಯೇ ಮಾದರಿಯಾಗಿರುವ



ಕೆರೆ ನೀರು ತುಂಬುವ ಯೋಜನೆ ರೂಪಿಸಿ, ಅದರಲ್ಲಿ ಯಶಸ್ವಿಯಾಗಿದ್ದು ಇಂದು ಈ ಯೋಜನೆ ರಾಷ್ಟ್ರದಾದ್ಯಂತ ಅನುಕರಣೀಯವಾಗಿದೆ.

ಕ್ಷೇತ್ರ ಪುನರ್ ವಿಂಗಡನೆಯ ನಂತರ 2008 ರಲ್ಲಿ ಬಬಲೇಶ್ವರ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾದರು. 2013 ರಲ್ಲಿ ಬಬಲೇಶ್ವರ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾದ ನಂತರ ನೀರು-ನೀರಾವರಿ ಕುರಿತು ಇವರ ಅತೀವ ಆಸಕ್ತಿಯನ್ನು ಗಮನಿಸಿದ್ದ ಹೈಕಮಾಂಡ್ ಸಿದ್ಧರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ 5 ವರ್ಷಗಳ ಕಾಲ ಜಲಸಂಪನ್ಮೂಲ ಸಚಿವರಾಗಿ ಇಡೀ ರಾಷ್ಟ್ರವೇ ಮೆಚ್ಚುವಂತೆ ನೀರಾವರಿ ಇಲಾಖೆಗೆ ಕಾಯಕಲ್ಪ ಒದಗಿಸಿದ್ದಾರೆ.

ಕೃಷ್ಣಾ ಮೇಲ್ದಂಡೆ ಯೋಜನೆ, ಆಣೆಕಟ್ಟುಗಳ, ನಾಲೆಗಳ ಆಧುನೀಕರಣ, ಭದ್ರಾಮೇಲ್ದಂಡೆ ಯೋಜನೆ, ರಾಮಥಾಳ ಸೂಕ್ಷ್ಮ ನೀರಾವರಿ ಯೋಜನೆ, ಮೆಕೆದಾಟು, ಎತ್ತಿನಹೊಳೆ, ಅತ್ಯಂತ ಎತ್ತರದ ಪ್ರದೇಶಕ್ಕೆ ನೀರಾವರಿ ಒದಗಿಸುವ ತುಬಚಿ-ಬಬಲೇಶ್ವರ ಏತನೀರಾವರಿ, ಆಡಳಿತ ಯಂತ್ರದಲ್ಲಿ ವ್ಯಾಪಕ ಸುಧಾರಣೆಗಳು, ಇಲಾಖೆಯಲ್ಲಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ರಾಜ್ಯದ ಜಲಸಂಪನ್ಮೂಲ ಇಲಾಖೆಗೆ ಮಾಂತ್ರಿಕ ಸ್ಪರ್ಶ ನೀಡಿದ ಎಂ.ಬಿ.ಪಾಟೀಲ್ ನೀರಿನ ಪಾಟೀಲ್, ಕೆನಾಲ್ ಪಾಟೀಲ್ ಎಂದೇ ರೈತ ಸಮುದಾಯದಲ್ಲಿ ಹೆಸರಾಗಿದ್ದಾರೆ. ಕಾವೇರಿ, ಕೃಷ್ಣಾ, ಮಹದಾಯಿ ಅಂತರ ರಾಜ್ಯ ಜಲವಿವಾದಗಳಲ್ಲಿ ಸ್ವತಃ ಸುಪ್ರಿಂಕೋರ್ಟ್ ಕಲಾಪಗಳಲ್ಲಿ ಭಾಗವಹಿಸಿರುವದನ್ನು ಗಮನಿಸಿದರೇ, ತಮಗೆ ವಹಿಸಿರುವ ಜವಾಬ್ದಾರಿ ಕುರಿತು ಇವರಿಗಿರುವ ಆಸಕ್ತಿ ಮತ್ತು ಬದ್ಧತೆಯನ್ನು ತೋರುತ್ತದೆ.

2018 ರಲ್ಲಿ ಬಬಲೇಶ್ವರ ಕ್ಷೇತ್ರ ಪುನರಾಯ್ಕೆಯಾದ ನಂತರ ಶ್ರೀ ಹೆಚ್. ಡಿ. ಕುಮಾರಸ್ವಾಮಿ ನೇತೃತ್ವದ ಸಮ್ಮಿಶ್ರ ಸರ್ಕಾರದಲ್ಲಿ ಡಾ ಎಂ. ಬಿ. ಪಾಟೀಲರು ಗೃಹ ಸಚಿವರಾಗಿ ಸೇವೆ ಸಲ್ಲಿಸಿದ್ದಾರೆ. ಗೃಹ ಸಚಿವರಾಗಿ ಅಲ್ಪಾವಧಿಯಲ್ಲಿ ಅಧಿಕಾರದಲ್ಲಿದ್ದರೂ, ಪೋಲೀಸ್ ಇಲಾಖೆಯಲ್ಲಿ ಮಹತ್ತರ ಬದಲಾವಣೆಗಳನ್ನು ತರಲು ಕಾರಣರಾಗಿದ್ದಾರೆ. ದಿನದ 24 ಗಂಟೆ, ವಾರದ 7ದಿನಗಳು, ವರ್ಷದ 365ದಿನಗಳು ನಿರಂತರ ಕೆಲಸ ಮಾಡುವ ಪೋಲಿಸ್ ಸಿಬ್ಬಂದಿಯ ಕಲ್ಯಾಣ-ಕ್ಕಾಗಿ ಔರಾದ್ಕರ್ ಸಮಿತಿಯ ವರದಿಯನ್ನು ಜಾ-ರಿಗೆ ತರುವಲ್ಲಿ ಗುರುತರ ಪಾತ್ರ ವಹಿಸಿದ್ದಾರೆ. ಈ ವರದಿಯು ಪೋಲಿಸ್ ಸಿಬ್ಬಂದಿಯ ವೇತನದಲ್ಲಿ



ಹೆಚ್ಚಳ, ಬಡ್ತಿ ಹಾಗೂ ಇನ್ನಿತರ ಬದಲಾವಣೆಗಳನ್ನು ಶಿಫಾರಸ್ಸು ಮಾಡಿತ್ತು. ಡಾ ಎಂ.ಬಿ.ಪಾಟೀಲರು ಗೃಹ ಮಂತ್ರಿಯಾಗಿ ತಮಗೆ ಲಭ್ಯವಿದ್ದ ಝೀರೋ ಟ್ರಾಫಿಕ್ ಸೌಲಭ್ಯವನ್ನು ನಿರಾಕರಿಸಿದರು. ಗೃಹ ಮಂತ್ರಿಗಳ ಪ್ರಯಾಣದ ಸಂದರ್ಭದಲ್ಲಿ ಅನುಸರಿಸುತ್ತಿದ್ದ ಪೋಲೀಸ್ ವಂದನೆ (ಸಲ್ಯೂಟ್) ಸಂಸ್ಕೃತಿಯನ್ನು ನಿಲ್ಲಿಸಿದರು. ರಾಜ್ಯದಲ್ಲಿ ಸುರಕ್ಷತೆ ಹಾಗೂ ಮಹಿಳೆಯರ ಭದ್ರತೆಗಾಗಿ ಪ್ರಪಂಚದ ವಿವಿಧ ಭಾಗಗಳಲ್ಲಿ ಅನುಭವಿಸುತ್ತಿರುವ ಉತ್ತಮ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ದೃಷ್ಟಿಯಿಂದ ಜಾಗತಿ-ಕ ಮಟ್ಟದ ಪ್ರಮುಖ ಸೈಬರ್ ಭದ್ರತೆ ಸಂಸ್ಥೆಗಳೊಂದಿಗೆ ಚರ್ಚಿಸಿ ಕಾರ್ಯಪ್ರವೃತ್ತರಾಗಿದ್ದರು.

ಬಿ.ಎಲ್.ಡಿ.ಇ. ಸಂಸ್ಥೆ ಅಧ್ಯಕ್ಷರಾಗಿ ಗುಣಮಟ್ಟದ ಶಿಕ್ಷಣದ ಜೊತೆಗೆ ಆಧುನಿಕ ಸ್ಪರ್ಶವನ್ನು ನೀಡಿದವರು. ಸಂಸ್ಥೆ ಇಂದು ಅವಿಭಜಿತ ವಿಜಯಪುರ-ಬಾಗಲಕೋಟ ಜಿಲ್ಲೆಗಳಲ್ಲಿ ಸುಮಾರು 80 ಕ್ಕೂ ಮಿಕ್ಕಿ ಪ್ರಾಥಮಿಕ ಶಿಕ್ಷಣದಿಂದ ವಿಶ್ವವಿದ್ಯಾಲಯದವರೆಗೆ ವಿವಿಧ ಶಿಕ್ಷಣ ಸಂಸ್ಥೆಗಳನ್ನು ಹೊಂದಿದ್ದು, ವಿಜಯಪುರದಲ್ಲಿ ಶ್ರೀ.ಬಿ.ಎಂ.ಪಾಟೀಲರ ಹೆಸರಿನಲ್ಲಿ 1200 ಹಾಸಿಗೆಯ ಚಾರಿಟೇಬಲ್ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದೆ. ಕಳೆದ ಕೊವಿಡ್ ಅವಧಿಯಲ್ಲಿ ಸರ್ಕಾರ ನಿಗಧಿಪಡಿಸಿದ ದರಕ್ಕಿಂತಲೂ ಶೇ.30 ಕಡಿಮೆ ಶುಲ್ಕ ಪಡೆದು ಅತೀ ಹೆಚ್ಚು ರೋಗಿಗಳಿಗೆ ಚಿಕಿತ್ಸೆ ನೀಡಿ, ಆರೋಗ್ಯ ಕ್ಷೇತ್ರದಲ್ಲಿ ಎಲ್ಲರಿಗೂ ಮಾದರಿಯಾಗಿದ್ದಾರೆ.

ವಚನಪಿತಾಮಹ ಡಾ.ಫ.ಗು.ಹಳಕಟ್ಟಿಯವರು ತಮ್ಮ ಜೀವಿತಾವಧಿಯಲ್ಲಿ ಸಂಗ್ರಹಿಸಿ, ಮುದ್ರಿಸಿದ 12ನೇ ಶತಮಾನದ ಬಸವಾದಿ ಶರಣರ ವಚನಗಳು ಮುಂದಿನ ಪೀಳಿಗೆಗೆ ತಲುಪಬೇಕು ಎಂದು ಚಿಂತಿಸಿ, ತಮ್ಮ ಸಮಗ್ರ ಸಾಹಿತ್ಯವನ್ನು 15 ಸಂಪುಟಗಳಲ್ಲಿ 10ಸಾವಿರ



ಪುಟಗಳಲ್ಲಿ ಮುದ್ರಿಸಿ, ನಾಡಿನ ತುಂಬ ಮಠ-ಮಾನ್ಯ, ಸಂಘ-ಸಂಸ್ಥೆಗಳಿಗೆ ಹಂಚಿದ್ದಾರೆ. ಬಸವಾದಿ ಶರಣರ ವಿಚಾರಧಾರೆಯು ಮುಂದಿನ ಪೀಳಿಗೆಗೆ ಪ್ರವಹಿಸಲು ಕಾರಣಿಕರ್ತರಾಗಿದ್ದಾರೆ.

ವಿಜಯಪುರವನ್ನಾಳಿದ ಆದಿಶಾಹಿ ಅರಸರ ಕಾಲದಲ್ಲಿ ರಚಿತಗೊಂಡ ಪರ್ಷಿಯನ್, ಉರ್ದು ಮತ್ತು ದಖನಿ ಭಾಷೆಗಳಲ್ಲಿರುವ ಈ ಸಾಹಿತ್ಯವನ್ನು ಕನ್ನಡಿಗರಿಗೆ ಅನುವಾದಿಸಿ ಸಮಗ್ರ 18 ಸಂಪುಟಗಳಲ್ಲಿ ಪ್ರಕಟಿಸಿ, ತಮ್ಮ ಸಾಹಿತ್ಯಾಸಕ್ತಿಯನ್ನು ತೋ-ರಿಸಿದ್ದಾರೆ. ವಿಜಯಪುರದ ಆದಿಶಾಹಿ ಅರಸರ ಕಾಲದ ಐತಿಹಾಸಿಕ ಭಾವಿಗಳನ್ನು, ಕೆರೆಗಳನ್ನು, ಸುರಂಗ ಮಾರ್ಗಗಳು ಕಾಲಕ್ರಮೇಣ ಹೂಳು ತುಂಬಿ ನಿರುಪಯುಕ್ತವಾಗಿದ್ದವು. ಎಂ.ಬಿ.ಪಾಟೀಲರು ವಿಶೇಷ ಆಸಕ್ತಿ ವಹಿಸಿ ಈ ಎಲ್ಲ ಕೆರೆ, ಭಾವಿಗಳನ್ನು ಸ್ವಚ್ಛಗೊಳಿಸಿ, ಅವುಗಳ ಪುನಶ್ಚೇತನಕ್ಕೆ ಕಾರಣವಾಗಿದ್ದು, ನೀರು ತುಂಬಿ ನಿಂತಿರುವ ಆ ಪ್ರದೇಶಗಳು ಇಂದು ಪ್ರವಾಸಿ ತಾಣಗಳಾಗಿವೆ. 2022 ಫೇಬ್ರುವರಿಯಲ್ಲಿ ಕೆ.ಪಿ.ಸಿ.ಸಿ ಪ್ರಚಾರ ಸಮಿತಿಯ ಅಧ್ಯಕ್ಷರಾಗಿ ನೇಮಕಗೊಂಡು, ಕರ್ನಾಟಕದಾದ್ಯಂತ ಸಂಚರಿಸಿ, ಬಿಜೆಪಿ ವೈಫಲ್ಯಗಳ ಕು-ರಿತು ಜಾಗೃತಿ ಮೂಡಿಸಿ, ಪಕ್ಷವನ್ನು ಸಂಘಟಿಸಿ, ಮೇ 2023 ರಲ್ಲಿ ನಡೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ತರಲು ಶ್ರಮಿಸಿದ್ದಾರೆ.

ಪ್ರವಾಸ, ಇತಿಹಾಸ, ಪರಂಪರೆ, ಕಲೆ ಆಸಕ್ತರಾಗಿರುವ ಎಂ.ಬಿ.ಪಾಟೀಲ್ ಪತ್ನಿ ಆಶಾ, ಬಸನಗೌಡ ಹಾಗೂ ಧ್ರುವ ಇಬ್ಬರು ಪುತ್ರರನ್ನು ಹೊಂದಿದ್ದು, ಸಹೋದರ ಸುನೀಲಗೌಡ ಪಾಟೀಲ ವಿಜಯಪುರ-ಬಾಗಲಕೋಟ ಅವಳಿ ಜಿಲ್ಲೆಗಳ ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳ ವಿಧಾನಪ-ರಿಷತ್ ಸದಸ್ಯರಾಗಿದ್ದಾರೆ. ಬಿಜಾಪುರ ಲಿಂಗಾಯತ ಶಿಕ್ಷಣ ಸಂಸ್ಥೆ ಅಧ್ಯಕ್ಷರಾಗಿ ಕಳೆದ 33 ವರ್ಷಗಳಿಂದ ಸುಧೀರ್ಘ ಸೇವೆ ಸಲ್ಲಿಸಿದ್ದಾರೆ.

"ಇವನಾರವ ಇವನಾರವ ಇವನಾರವ ಎಂದೆನಿಸದೆ, ಇವ ನಮ್ಮವ ಇವ ನಮ್ಮವ ಇವ ನಮ್ಮವ, ಇವ ನಮ್ಮ ಕೂಡಲಸಂಗಮದೇವನ ಮನೆಯ ಮಗನೆಂದನಿಸಯ್ಯ" ಎಂದು ಸರ್ವರನ್ನೂ ಅಪ್ಪಿಕೊಳ್ಳುವ ಸಹೃದಯತೆ ನಮ್ಮ ಎಂ.ಬಿ.ಪಾಟೀಲ್‌ರಲ್ಲಿದೆ.

## ಹುಡುಕಿಕೊಂಡು ಬಂದ ಪ್ರಶಸ್ತಿ ಗೌರವ



ಸಚಿವ ಎಂ.ಬಿ.ಪಾಟೀಲ ಅವರ ರಾಜಕೀಯ, ಸಾಮಾಜಿಕ, ಸಾಹಿತ್ಯಕ, ಶೈಕ್ಷಣಿಕ ಬದ್ಧತೆಗಳಿಂದಾಗಿ "ಬಸವಶಾಂತಿ", "ಆಧುನಿಕ ಭಗೀರಥ", "ಮೃತ್ಯುಂಜಯ" ಪ್ರಶಸ್ತಿ, "ಬಿ.ಡಿ.ಜತ್ತಿ ಸ್ಮಾರಕ" ಪ್ರಶಸ್ತಿ, "ಪರ್ಯಾವರಣ ರಕ್ಷಕ ಸಮ್ಮಾನ-2019" ಸೇರಿದಂತೆ ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಇವರ ಸೇವೆಯನ್ನು ಮನ್ನಿಸಿ ಕೋಲ್ಹಾಪುರದ ಡಿ.ವೈ.ಪಾಟೀಲ್ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ.

ಕರ್ನಾಟಕದಲ್ಲಿ ಕೈಗಾರಿಕೆ ಬೆಳವಣಿಗೆ, ವಿದೇಶಿ ಬಂಡವಾಳ ಆಕರ್ಷಣೆಯ ಸಾಧನೆಗಾಗಿ ಬೆಂಗಳೂರು ಪ್ರೆಸ್ ಕ್ಲಬ್ ವತಿಯಿಂದ ಕೊಡಮಾಡುವ 'ವರ್ಷದ ವ್ಯಕ್ತಿ-2024' ಪ್ರಶಸ್ತಿಯನ್ನು ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರು ನೀಡಿ ಗೌರವಿಸಿದ್ದಾರೆ.

## 1991 ರಿಂದ 2026 ವರೆಗೆ ರಾಜಕೀಯದಲ್ಲಿ ದಣಿವರಿಯದ ಪಯಣ



1991 ರಿಂದ ಉಪಚುನಾವಣೆಯಲ್ಲಿ ಶಾಸಕರಾದ ನಂತರ ಕಳೆದ 32 ವರ್ಷಗಳಿಂದ ಕಟ್ಟಾ ಕಾಂಗ್ರೆಸ್ಸಿಗರಾಗಿ ಪಕ್ಷಕ್ಕೆ ತನು-ಮನ-ಧನದಿಂದ ಸೇವೆ ಸಲ್ಲಿಸಿರುವ ಎಂ.ಬಿ.ಪಾಟೀಲರವರು ಲಿಂಗಾಯತ ಸಮುದಾಯದ ಪ್ರಬಲ ನಾಯಕರಾಗಿದ್ದಾರೆ. ಯಾವುದೇ ಕಪ್ಪುಚುಕ್ಕೆ ಇಲ್ಲದೆ ತಮ್ಮ ರಾಜಕೀಯ ಜೀವನವನ್ನು ಮುನ್ನೆಡೆಸಿಕೊಂಡು ಬಂದಿದ್ದಾರೆ. ಎಂ.ಬಿ.ಪಾಟೀಲ್ ರವರು ಎರಡು ಬಾರಿ ತಿಕೋಟಾ ಹಾಗೂ ನಾಲ್ಕನೇ ಬಾರಿ ಬಬಲೇಶ್ವರ ಕ್ಷೇತ್ರದಿಂದ ಒಟ್ಟು 6 ಬಾರಿ ಶಾಸಕರಾಗಿ ಹಾಗೂ ಒಂದು ಬಾರಿ ವಿಜಯಪುರ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ ಆಯ್ಕೆಯಾಗಿದ್ದಾರೆ.

2023ರಲ್ಲಿ ಶ್ರೀ ಸಿದ್ದರಾಮಯ್ಯನವರ ಸಚಿವ ಸಂಪುಟದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾಗಿ 2026 ರವರೆಗೆ ಕಾರ್ಯನಿರ್ವಹಿಸಿದ್ದಾರೆ.

ಎಂ ಬಿ ಪಾಟೀಲರವರು 6 ಸಲ ಶಾಸಕರು ಮತ್ತು ಒಂದು ಬಾರಿ ಲೋಕಸಭೆ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ.

ಇದೀಗ ಶ್ರೀ ಡಿ.ಕೆ.ಶಿವಕುಮಾರ ಅವರ ನೇತೃತ್ವದ ಸಚಿವ ಸಂಪುಟದಲ್ಲಿ ಮತ್ತೆ ಸಚಿವರಾಗಿ ಪ್ರಮಾಣ ವಚನ ಸ್ವೀಕ-ರಿಸಿದ್ದಾರೆ.

# ಮೂಕನಾಯಕ ದಿನಪತ್ರಿಕೆ ಮರುಪ್ರಾರಂಭೋತ್ಸವದ ಪೋಸ್ಟರ್ ಬಿಡುಗಡೆ




ಬೀದರ: ಕರ್ನಾಟಕ ದಲಿತ ಸಂಘರ್ಷ ಸಮಿತಿ (ಭೀಮವಾದ) ಬೀದರ ಜಿಲ್ಲಾ ಘಟಕದ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಅವರು ಸ್ಥಾಪಿಸಿದ್ದ ಐತಿಹಾಸಿಕ "ಮೂಕನಾಯಕ" ದಿನಪತ್ರಿಕೆಯ ಮರುಪ್ರಾರಂಭೋತ್ಸವ ಅಂಗವಾಗಿ ಪೋಸ್ಟರ್ ಬಿಡುಗಡೆ ಕಾರ್ಯಕ್ರಮವನ್ನು ಮಂಗಳವಾರ ಧಮ್ಮದರ್ಶನ ಭೂಮಿ ವೈಶಾಲಿ ನಗರ ಆಣದೂರದಲ್ಲಿ ಆಯೋಜಿಸಲಾಯಿತು.

ಡಾ. ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿಸುವಲ್ಲಿ ಮೂಕನಾಯಕ ದಿನಪತ್ರಿಕೆ ಮಹತ್ವದ ಪಾತ್ರ ವಹಿಸಿತ್ತು. ಇದೀಗ ದಿನಪತ್ರಿಕೆಯ ಮರುಪ್ರಾರಂಭವು ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಸಂವಿಧಾನಿಕ ಮೌಲ್ಯಗಳ ಪ್ರಸಾರಕ್ಕೆ ಹೊಸ ಶಕ್ತಿ ತುಂಬಲಿದೆ

ಮೂಕನಾಯಕ ದಿನಪತ್ರಿಕೆಯ ಅಧಿಕೃತ ಬಿಡುಗಡೆ ಸಮಾರಂಭವು ಜೂನ್ 9, 2026ರಂದು ಬೆಂಗಳೂ-ರಿನ ಟೌನ್ ಹಾಲ್‌ನಲ್ಲಿ ಬೆಳಗ್ಗೆ 11.30 ಗಂಟೆಗೆ ನಡೆಯಲಿದ್ದು, ಬೃಹತ್ ಸಂಖ್ಯೆಯಲ್ಲಿ ಬುದ್ಧಿಜೀವಿಗಳು, ದಲಿತ ಪರ ಸಂಘಟನೆಗಳ ಮುಖಂಡರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರ ಸಮ್ಮುಖದಲ್ಲಿ ದಿನಪತ್ರಿಕೆಯನ್ನು ಬಿಡುಗಡೆ ಮಾಡಲಾಗುವುದು. ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಾರ್ವಜನಿಕರಿಗೆ ಕರೆ ನೀಡಲಾಯಿತು.

ಪೋಸ್ಟರ್ ಬಿಡುಗಡೆ ಕಾರ್ಯಕ್ರಮದಲ್ಲಿ ಭಂತೆ ಜ್ಞಾನಸಾಗರ ಥೇರೋ ಹಾಗೂ ಭಂತೆ ಸಂಘರಕ್ಷಿತ್ ದಿವ್ಯ ಅವರು ಉಪಸ್ಥಿತರಿದ್ದು ಆಶೀರ್ವಚನ ನೀಡಿದರು.ಕಾರ್ಯಕ್ರಮದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಭೀಮವಾದ) ಜಿಲ್ಲಾ ಸಂಚಾಲಕ ಸುನೀಲ್ ಸಂಗಮ್, ಬಾಬು ಆಣದೊರೆ, ಅಂಬಾದಾಸ್ ಸೋನಿ, ಪ್ರೇಮ್ ಕುಮಾರ್ ಸರಿಕಾರ್, ಅಂಕೋಶ್ ಬ್ಯಾಲಹಳ್ಳಿ, ವಿಜಯ್ ಸೋನಿ, ರಾಮದಾಸ್ ಸೋನಿ ಸೇರಿದಂತೆ ಹಲವು ದಲಿತ ಪರ ಹೋರಾಟಗಾರರು, ಬುದ್ಧಿಜೀವಿಗಳು ಹಾಗೂ ಸಮಾಜಮುಖಿ ಕಾರ್ಯಕರ್ತರು ಭಾಗವಹಿಸಿದ್ದರು.

# ಕುಖ್ಯಾತ ಮನೆಗಳ್ಳನ ಬಂಧನ: 10.30 ಲಕ್ಷ ರೂ ಮೌಲ್ಯದ ಸ್ವತ್ತು ವಶ



ಕಲಬುರಗಿ: ಅಶೋಕ ನಗರ ಪೊಲೀಸರು ಕಾರ್ಯಾಚರಣೆ ನಡೆಸಿ 7 ಮನೆ ಕಳ್ಳತನ ಪ್ರಕರಣದಲ್ಲಿ ಭಾಗಿಯಾಗಿದ್ದ ಕುಖ್ಯಾತ ಮನೆಗಳ್ಳನನ್ನು ಬಂಧಿಸಿ,ಬಂಧಿತನಿಂದ 10.30 ಲಕ್ಷ ರೂ ಮೌಲ್ಯದ ಸ್ವತ್ತು ವಶ

ಪಡಿಸಿಕೊಂಡಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ಅವರು ಇಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ನಗರದ ಸಂತೋಷ ಕಾಲೋನಿ ನಿವಾಸಿ ಚಿತ್ತಾಪುರ ತಾಲೂಕಿನ ಯರಗಲ್ ಗ್ರಾಮದ ಚಾಲಕ ವೃತಿಯ ಮಲ್ಲಿಕಾರ್ಜುನ ದೇವಿಂದ್ರಪ್ಪ ತಳವಾರ ( 33 ವರ್ಷ) ಬಂಧಿತ ಆರೋಪಿ. ಕಳೆದ ಮಾರ್ಚ 1 ರಂದು ಕಾಂತಾ ಕಾಲೋನಿ ನಿವಾಸಿ ತೂಗುದೀಪ್ ಜಗನ್ನಾಥ ಸೂರನ್ ಎಂಬುವವರು ಮನೆಯಲ್ಲಿ 2.65 ಲಕ್ಷ ರೂ ಮೌಲ್ಯದ ನಗನಾಣ್ಯ ಕಳುವಾದ ಬಗ್ಗೆ ಅಶೋಕ ನಗರ ಠಾಣೆಗೆ ದೂರು ನೀಡಿದ್ದರು.

ಪ್ರಕರಣದ ಆರೋಪಿಯ ಪತ್ತೆ ಕುರಿತು ಉಪಪೊಲೀಸ ಆಯುಕ್ತರಾದ ಶಾಲೂ, ಪ್ರವೀಣ ಹೆಚ್, ನಾಯಕ್ ಸಹಾಯಕ ಪೊಲೀಸ್ ಆಯುಕ್ತ ಶರಣಬಸಪ್ಪ ಸುಬೇದಾರ, ಅಶೋಕ ನಗರ ಪೊಲೀಸ್ ಠಾಣೆ ಪಿಐ ಸತೀಶ ಕಣಿಮೇಶ್ವರ ನೇತೃತ್ವದಲ್ಲಿ ಸಿಬ್ಬಂದಿಗಳಾದ ವೈಜಿನಾಥ , ಶಿವಪ್ರಕಾಶ, ಮುಜಾಹಿದ್ , ಕರಣ್, ನೀಲಕಂಠರಾಯ, ಚಂದ್ರಶೇಖರ ಹಾಗೂ ಹರಿಕಿಶೋರ ಅವರನ್ನೊಳಗೊಂಡ ತಂಡವನ್ನು ರಚಿಸಲಾಗಿತ್ತು.ಈ ತಂಡವು ಆರೋಪಿತರ ಕುರಿತು ಮಾಹಿತಿ ಕಲೆ ಹಾಕುತ್ತಿರುವಾಗ ಬಿದ್ದಾಪುರ ಕಾಲೋನಿ ಹತ್ತಿರ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಆರೋಪಿತನನ್ನು ವಶಕ್ಕೆ ಪಡೆದುಕೊಂಡು ಕುಲಂಕೂಷವಾಗಿ ವಿಚಾರಣೆಗೊಳಪಡಿಸಿದಾಗ ಆರೋಪಿತನು ಒಟ್ಟು 7 ಪ್ರಕರಣಗಳಲ್ಲಿ ಮನೆ ಕಳ್ಳತನ ಮಾಡಿರುವ ಬಗ್ಗೆ ತನ್ನೊಪ್ಪಿಕೊಂಡಿದ್ದು ಆರೋಪಿತರ ವಿರುದ್ಧ ದಸ್ತಗಿರಿ ಕ್ರಮ ಕೈಗೊಂಡು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ವಿವರಿಸಿದರು. ಸುದ್ದಿಗೋಷ್ಠಿಯಲ್ಲಿ ಉಪ ಪೊಲೀಸ್ ಆಯುಕ್ತರಾದ ಶಾಲೂ ಹಾಗೂ ಪ್ರಚೀಣ್ ಎಚ್. ನಾಯಕ್ ಅವರು ಉಪಸ್ಥಿತರಿದ್ದರು.

# ಕಲಬುರಗಿ ಕಲಾವಿದ ಗಿರೀಶ್ ಕುಲಕರ್ಣಿಗೆ ರಾಷ್ಟ್ರೀಯ ಮಟ್ಟದ ಪ್ರಶಸ್ತಿ





ಕಲಬುರಗಿ: ನಗರದ ಖ್ಯಾತ ಸಮಕಾಲೀನ ಕಲಾವಿದ ಗಿರೀಶ್ ಕುಲಕರ್ಣಿ ಅವರು ತೆಲಂಗಾಣ ಸರ್ಕಾರದ ಪ್ರವಾಸೋದ್ಯಮ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಚಿತ್ರಮಯೀ ಸ್ಟೇಟ್ ಗ್ಯಾಲರಿ ಆಫ್ ಆರ್ಟ್ ವತಿಯಿಂದ ಆಯೋಜಿಸಲಾದ "ಆಲ್ ಇಂಡಿಯಾ ಆರ್ಟ್ ಸ್ಪರ್ಧೆ ಮತ್ತು ಪ್ರದರ್ಶನ 2026"ರ 7ನೇ ಆವೃತ್ತಿಯಲ್ಲಿ ನಗದು ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಹೈದರಾಬಾದ್‌ನ ಮಾಧಾಪುರದ ಕಾವೂರಿ ಹಿಲ್ಸ್‌ನಲ್ಲಿರುವ ಸ್ಟೇಟ್ ಗ್ಯಾಲರಿ ಆಫ್ ಆರ್ಟ್‌ನಲ್ಲಿ ನಡೆಯಲಿರುವ ಈ ರಾಷ್ಟ್ರೀಯ ಮಟ್ಟದ ಕಲಾ ಪ್ರದರ್ಶನದಲ್ಲಿ ದೇಶದ ವಿವಿಧ ಭಾಗಗಳ ಕಲಾವಿದರು ಭಾಗವಹಿಸಿದ್ದರು. ಗಿರೀಶ್ ಕುಲಕರ್ಣಿ ಅವರ ಕಲಾಕೃತಿಯನ್ನು ಆಯ್ಕೆ ಹಾಗೂ ತೀರ್ಪುಗಾರರ ಸಮಿತಿಯವರು ಅತ್ಯುತ್ತಮ ಕೃತಿಯಾಗಿ ಪರಿಗಣಿಸಿ ನಗದು ಪ್ರಶಸ್ತಿಗೆ ಶಿಫಾರಸು ಮಾಡಿದ್ದಾರೆ.ಪ್ರದರ್ಶನವು ಮೇ 23, 2026 ರಂದು ಉದ್ಘಾಟನೆಯಾಗಲಿದ್ದು, ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಸಮಾರೋಪ ಕಾರ್ಯಕ್ರಮ ಜೂನ್ 6, 2026 ರಂದು ನಡೆಯಲಿದೆ. ಈ ಸಂದರ್ಭದಲ್ಲಿ ಪ್ರಶಸ್ತಿ, ಪ್ರಮಾಣಪತ್ರ ಹಾಗೂ ಕ್ಯಾಟಲಾಗ್‌ಗಳನ್ನು ವಿತರಿಸಲಾಗುತ್ತದೆ. ಗಿರೀಶ್ ಕುಲಕರ್ಣಿ ಅವರ ಈ ಸಾಧನೆಗೆ ಕಲಬುರಗಿ ಕಲಾವಿದರು ಹಾಗೂ ಸ್ನೇಹಿತರು ಅಭಿನಂದನೆಗಳನ್ನು ತಿಳಿಸಿದ್ದಾರೆ.



# ಶ್ರೀ ವಿದ್ಯಾರಣ್ಯ ಪ್ರೌಢ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವ ಸಂಭ್ರಮ

ಬೀದರ್: ನಗರದ ಸರಸ್ವತಿ ಶಿಕ್ಷಣ ವಿಕಾಸ ಸಮಿತಿ ಸಂಚಾಲಿತ ಶ್ರೀ ವಿದ್ಯಾರಣ್ಯ ಪ್ರೌಢ ಶಾಲೆಯಲ್ಲಿ 2026-27ನೇ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವವನ್ನು ಸೋಮವಾರ ಸಂಭ್ರಮದಿಂದ ಆಚರಿಸಲಾಯಿತು.

ಬೆಳಿಗ್ಗೆ ಆರಂಭವಾದ ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ದ್ವಾರದಲ್ಲಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರಿಗೆ ಪುಷ್ಪವರ್ಷಗೈದು ಸ್ವಾಗತ ಕೋರಲಾಯಿತು.ಶಾಲೆಯ ಮುಖ್ಯಗುರುಗಳಾದ ಪ್ರತಿಭಾ ಚಾಮಾ ಅವರು ವಿದ್ಯಾರ್ಥಿಗಳು ಶ್ರದ್ಧೆ, ಶಿಸ್ತು, ಆತ್ಮವಿಶ್ವಾಸ ಮತ್ತು ಪರಿಶ್ರಮದಿಂದ ಹೊಸ ಶೈಕ್ಷಣಿಕ ವರ್ಷವನ್ನು ಆರಂಭಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಪ್ರೊ. ಎಸ್.ಬಿ. ಸಜ್ಜನಶೆಟ್ಟಿ ಮಾತನಾಡಿ, ಪ್ರೌಢ ಹಂತವೇ ಮಕ್ಕಳ ಭವಿಷ್ಯದ ಭದ್ರಬುನಾದಿಯಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ಅಡಗಿರುವ ಸಾಮರ್ಥ್ಯ ಮತ್ತು ದೈವಿಕ ಶಕ್ತಿಯನ್ನು ಗುರುತಿಸಿ ಜೀವನದ ಗುರಿ ಸಾಧಿಸುವಂತೆ ಸಲಹೆ ನೀಡಿದರು.ಕಾರ್ಯಕ್ರಮದಲ್ಲಿ ವಿದ್ಯಾರ್ಥಿ ಪ್ರತಿನಿಧಿಯಾಗಿ 10ನೇ ತರಗತಿಯ ವಿದ್ಯಾರ್ಥಿ ಆದಿತ್ಯ ಅನಿಲಕುಮಾರ ಉಪಸ್ಥಿತರಿದ್ದರು.ರಿತಿಕಾ ಸ್ವಾಗತ ಹಾಗೂ ಪರಿಚಯ ನೆರವೇರಿಸಿದರೆ, ಪುನಿತ್ ವೈಯಕ್ತಿಕ ಗೀತೆ ಹಾಡಿದರು. ಆದಿತ್ಯ ವಂದನಾರ್ಪಣೆ ಸಲ್ಲಿಸಿದರೆ, ಸುಪ್ರಿಯಾ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದ ಅಂತ್ಯದಲ್ಲಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಪುಸ್ತಕಗಳನ್ನು ವಿತರಿಸಲಾಯಿತು.

# ಸನ್ನತಿಯಲ್ಲಿ ವೈದಿಕ ಪರಂಪರೆಯ ಕಲಿಕೆ ಜಗದೀಶ್ ಶಾಸ್ತ್ರಿಗಳ ಕಾರ್ಯ ಶ್ಲಾಘನೀಯ:ಬಸವರಾಜ ಮಹಾಮುನಿ



ಕಲಬುರ್ಗಿ:ಹಿಂದೂ ಧರ್ಮವನ್ನು ಸಬಲೀಕರಣಗೊಳಿಸುವ ಮತ್ತು ಸನಾತನ ಧರ್ಮದ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಇಂದಿನ ಪೀಳಿಗೆಗೆ ಸಂಸ್ಕಾರ ನೀಡುವುದು ಅತ್ಯಗತ್ಯವಾಗಿದೆ. ಈ ನಿಟ್ಟಿನಲ್ಲಿ ಸನ್ನತಿ ಜಗದೀಶ್ ಶಾಸ್ತ್ರಿಗಳು ಬರೋಬ್ಬರಿ 180 ವಿದ್ಯಾರ್ಥಿಗಳಿಗೆ ವೈದಿಕ ಪರಂಪರೆಯನ್ನು ಧಾರೆ ಎರೆಯುತ್ತಾ ಮಹತ್ತರವಾದ ಪ್ರಯತ್ನ ಮಾಡುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದು ಅಂತರಾಷ್ಟ್ರೀಯ ಆಕಾಶವಾಣಿ ಕಲಾವಿದರಾದ ಬಸವರಾಜ ಮಹಾಮುನಿ ಅವರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.ಯಾದಗಿರಿ ಶ್ರೀ ವಿನಾಯಕ ನಗರ ಶ್ರೀ ಶೈಲ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಶ್ರೀ ಗುರು ಸೋಮೇಶ್ವರ ವೈದಿಕ ಜ್ಯೋತಿ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಜಾನಪದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಜಾನಪದ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಆಧುನಿಕತೆಯ ಅಬ್ಬರದಲ್ಲಿ ನಮ್ಮ ಮೂಲ ಸಂಸ್ಕೃತಿ ಮತ್ತು ವೈದಿಕ ಪರಂಪರೆಗಳು ಮರೆಯಾಗುತ್ತಿರುವ ಈ ಕಾಲಘಟ್ಟದಲ್ಲಿ, ಜಗದೀಶ್ ಶಾಸ್ತ್ರಿಗಳು ಕೈಗೊಂಡಿರುವ ಈ ಕಾರ್ಯ ಕೇವಲ ಶಿಕ್ಷಣವಲ್ಲ, ಅದೊಂದು ಧರ್ಮ ಜಾಗೃತಿಯ ಮಹಾ ಯಜ್ಞ ಎಂದರು.ಪ್ರಖ್ಯಾತ ಆಧ್ಯಾತ್ಮಿಕ ಚಿಂತಕರು ಯಾದಗಿರಿ ರಾಮಕೃಷ್ಣ ವಿವೇಕಾನಂದ ಆಶ್ರಮದ ಡಾ.ವೇಣುಗೋಪಾಲ ಗುರೂಜಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮಾನವನು ತನ್ನ ಮನಸ್ಸಿನ ಮೋಹ, ಆಸೆ ಮತ್ತು ಅಹಂಕಾರಗಳಿಂದ ಮುಕ್ತನಾದಾಗ ಮಾತ್ರ ಅವನಲ್ಲಿರುವ ನೈಜ ಚೈತನ್ಯದ ಶಕ್ತಿ ಮತ್ತು ದೈವಿಕತೆ ಹೊರಹೊಮ್ಮಲು ಸಾಧ್ಯ, ಎಂದರು.

ಈ ವೇಳೆಯಲ್ಲಿ ಪರ್ಥರೆಡ್ಡಿ ವಕೀಲರು ಹತ್ತಿಕುಣಿ,ವಿರೂಪಾಕ್ಷಯ್ಯ ಸ್ವಾಮಿ,ಶಿವಕುಮಾರ್ ಸ್ವಾಮಿ ಚಂಡ್ರಿಕೆ,ಮಾರುತಿ ದುಪ್ಪಲಿ ಯಾದಗಿರಿ,ಬಸವರಾಜ್ ಗೌಡ ಕೆ ಎಸ್ ಆರ್ ಟಿ ಸಿ ನಿವೃತ್ತ ಮೆಕ್ಯಾನಿಕ್ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದ ಕಲಾವಿದರಾದ ಕಥಾ ಕೀರ್ತನ,ಉದಯ್ ಕುಮಾರ ಶಾಸ್ತ್ರಿಗಳು,ಸುಗಮ ಸಂಗೀತ ಶ್ರೀಶೈಲ ಗವಾಯಿಗಳು ಭಕ್ತಿಗೀತೆ,ಅಭಿಷೇಕ್ ಗವಾಯಿಗಳು.

ವಚನ ಗಾಯನ,ಜಗದೀಶ್ ಕಲಾವಿದರು,ತತ್ವಪದ ಸೋಮಯ್ಯ ಗವಾಯಿಗಳು ಹಿರೇಮಠ.ವಾದ್ಯ ಸಹಕಾರರು,ಅಭಿಷೇಕ್ ವಿಶ್ವಕರ್ಮ ಕೊಡ್ಲಾ,ಮಂಜುನಾಥ್ ದೊಣ್ಣಾಗಾವ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಂಗೀತ ಮನಸ್ಸಿಗೆ ಶಾಂತಿ ಸಮಾಧಾನ ನೆಮ್ಮದಿ ನೀಡಿ ಜೀವನದಲ್ಲಿ ಹುರುಪು ಹುಮ್ಮಸ್ಸು ನೀಡಲು ಸಹಕಾರಿ: ಎಂ.ಬಿ.ಪಾಟೀಲ




ಕಲಬುರಗಿ:ಗಾಯಕನೊಬ್ಬ ಗಾಯನ ಪ್ರಕಾರ ವಿವಿಧ ಎಂಬ ಸಂಗೀತ ಕಾರ್ಯಕ್ರಮ ಜೂ 2ರಂದು ಕನ್ನಡ ಭವನದಲ್ಲಿ ಮಂಗಳವಾರ ರಂದು ಶ್ರೀಮತಿ ಎಸ್. ಎಸ್. ಕುಮುದಿನಿಬಾಯಿ ಮಿಟ್ಟಿಮನಿ (ಸ್ಮರಣಾರ್ಥ) ಹಾಗೂ ನಾದಪ್ರಿಯ ಫ್ರೆಂಡ್ಸ್ ಗ್ರೂಪ್, ಕಲಬುರಗಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿತ್ತು. ನಗರದಲ್ಲಿ ಪ್ರಥಮ ಬಾರಿಗೆ ಸಂಗೀತ ಕಾರ್ಯಕ್ರಮ ವನ್ನು ದೂರದರ್ಶನ ಕೇಂದ್ರದ ನಿವೃತ್ತ ನಿರ್ದೇಶಕರು ಎಂ. ಬಿ. ಪಾಟೀಲ್ ಸಂಗೀತ ನುಡಿಸುತ್ತಾ ಉದ್ಘಾಟಿಸಿ ಮಾತನಾಡುತ್ತಾ ಸಂಗೀತ ಮನಸ್ಸಿಗೆ ಶಾಂತಿ, ಸಮಾಧಾನ ನೆಮ್ಮದಿ ನೀಡಿ ಜೀವನದಲ್ಲಿ ಹುರುಪು ಹುಮ್ಮಸ್ಸು ನೀಡಲು ಸಹಕಾರಿ ಆಗಿದೆ. ಈ ಭಾಗದ ಅನೇಕ ಕಲಾವಿದರಿಗೆ ಆಕಾಶವಾಣಿ ಹಾಗೂ ದೂರದರ್ಶನ ಒಳ್ಳೆಯ ಅವಕಾಶ ನೀಡಿ ಸಂಗೀತ,ಕಲೆ, ಸಾಹಿತ್ಯ ಬೆಳೆಸಲು ಸಹಕಾರಿಯಾಯಿತು. 1980ಯುಗ ಚಲಚಿತ್ರ ಸಂಗೀತದ ಅಪರೂಪ ಯುಗವಾಗಿತ್ತು. ಕಿಶೋರ್ ಕುಮಾರ,ಲತಾ ಮಂಗೇಶ್ಕರ್,ಮಹಮ್ಮದ ರಫಿ ಇನ್ನೂ ಅನೇಕ ಕಲಾವಿದರ ಸಂಗೀತ ಸಾಹಿತ್ಯ ಜನ ಮಾನಸದಲ್ಲಿ ಉಳಿದುಕೊಂಡಿದೆ ಎಂದು ಹಳೆಯ ನೆನಪುಗಳನ್ನು ಮೆಲುಕು ಹಾಕಿದರು. ನಿತ್ಯವೂ ನಾನು ಕೂಡ ಸಂಗೀತ ಅಭ್ಯಾಸ ಮಾಡುತ್ತೇನೆ. ಅದು ನಿತ್ಯವು ಆನಂದ,ಸಂತೋಷ ತಂದು ಕೊಡುವ ಮೂಲಕ ನಮ್ಮನ್ನು ಚಿಂತೆಯಿಂದ ದೂರ ಇಡಲು ಉತ್ತಮ ಔಷಧ ಎಂದರೆ ತಪ್ಪಾಗಲಾರದು ಎಂದು ಸಂಗೀತ ಕುರಿತು ವಿವರವಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಎಲ್ಲ ಕಲಾವಿದರ,ಸಾಹಿತ್ಯ ರಚನೆಕಾರರ ನೆನೆಯುವುದು ಸೂಕ್ತವೆಂದು ಹೇಳಿದರು. ಕರೋಕೆ ಯುಗದಲ್ಲಿ ಎಲ್ಲರೂ ಹಾಡುವವರೇ ಹೆಚ್ಚು ಆದರೆ ಕೇಳುವವರೇ ಇಲ್ಲವೆಂದರು ವಿಷಾದ ವ್ಯಕ್ತ ಪಡಿಸಿದರು. ಗುಲಬುರ್ಗಾ ವಿಶ್ವವಿದ್ಯಾಲಯ ಮಾಜಿ ಕಾರ್ಯ ನಿರ್ವಹಣಾ ಕುಲಪತಿ ಡಾ. ಅಬ್ಬುಲ್ ರಬ್ ಉಸ್ತಾದ್ ಅವರು ಸಂಗೀತದಲ್ಲಿ ಹಿಂದಿ ಚಲನಚಿತ್ರದಲ್ಲಿ ಮೊಹಮ್ಮದ್ ರಫಿ,ಕಿಶೋರ್,ಸಂಗೀತ ನಿರ್ದೇಶಕ ನೌಶಾದ್ ಉತ್ತಮ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು.

ಕಲಬುರಗಿಯ ಹಿರಿಯ ಗಾಯಕ, 'ವಾಯ್ಸ್ ಆಫ್ ಕಿಶೋರ್ ಕುಮಾರ್' ಖ್ಯಾತಿಯ ರಮೇಶ ಜೋಶಿ ಅವರು ಹಿಂದೂಸ್ತಾನಿ ಶಾಸ್ತ್ರೀಯ, ಸುಗಮ ಸಂಗೀತ, ಭಾವಗೀತೆ, ದಾಸರ ಪದಗಳು, ವಚನಗಳು, ಜಾನಪದ ಹಾಗೂ ಚಲನಚಿತ್ರ ಗೀತೆಗಳು ಸೇರಿದಂತೆ ವಿವಿಧ ಗಾಯನ ಪ್ರಕಾರಗಳನ್ನು ಏಕವ್ಯಕ್ತಿಯಾಗಿ ಪ್ರಸ್ತುತಪಡಿಸಿದರು. ಅವರ ಜತೆಗೆ ಅವರ ಮೊಮ್ಮಗಳು ಶ್ರೀಶಾ ಜೋಶಿ ಹಾಡಿ ಎಲ್ಲರ ಮೆಚ್ಚುಗೆ ಪಡೆದಳು.

ತಬಲಾ ವಾದಕ ಜಯರಾವ ಕುಲಕರ್ಣಿ, ಸಂಗೀತ ಕಲಾವಿದ ಪ್ರಕಾಶ ಕುಲಕರ್ಣಿ, ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಪ್ರಸಾದ ಅಷ್ಟಗಿ ಕಾರ್ಯಕ್ರಮ ನಿರೂಪಣೆಯ ಮಾಡಿದರು. ಕಲಬುರಗಿ

ಸಮಸ್ತ ಸಂಗೀತ ಪ್ರಿಯರು, ಕಲಾರಸಿಕರು ಹಾಗೂ ಸಾರ್ವಜನಿಕರು ಆಗಮಿಸಿ,ಕಲಾವಿದರನ್ನು ಪ್ರೋತ್ಸಾಹಿಸಿದರು ನಾದಪ್ರಿಯ ಫ್ರೆಂಡ್ಸ್ ಗ್ರೂಪ್‌ನ ಅಧ್ಯಕ್ಷ ಕೆ.ಪಿ. ಗಿರಿಧರ ಹಾಗೂ ಸಾಹಿತಿ ಡಾ. ಅಂಬುಜಾ ಮಳಖೇಡಕರ ಅವರು ತಿಳಿಸಿದರು. ಜೋಶಿ ಕುಟುಂಬದವರು ಉಪಸ್ಥಿತರಿದ್ದರು.

# ಜೂನ್ 5 ರಂದು ವಿಷ್ಣು ಪಂಚಾಯತನ ಯಾಗ, ಲಕ್ಷ ಕುಂಕುಮಾರ್ಚನೆ

ಕಲಬುರಗಿ : ಅಧಿಕಮಾಸದ ಪುಣ್ಯ ಸಂದರ್ಭದಲ್ಲಿ ಲೋಕಕಲ್ಯಾಣ, ವಿಶ್ವಶಾಂತಿ ಹಾಗೂ ಸನಾತನ ಧರ್ಮದ ಪ್ರಚಾರದ ಉದ್ದೇಶದಿಂದ ಕರುಣೇಶ್ವರ ನಗರದ ಶ್ರೀ ಜೈ ವೀರ ಹನುಮಾನ್ ಮಂದಿರದಲ್ಲಿ ಜೂನ್ 5ರಂದು ವೈಭವಯುತ ಪುರುಷೋತ್ತಮ ಸತ್ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಆಯೋಜಕರಾದ ರಮಾಕಾಂತ ಜೋಶಿ ಅವರು ತಿಳಿಸಿದ್ದಾರೆ. ಅಧಿಕಮಾಸದ ವಿಶೇಷ ಅಂಗವಾಗಿ ಒಂದು ಲಕ್ಷ ನಾರಾಯಣ ಅಷ್ಟಾಕ್ಷರಿ ಮಹಾಮಂತ್ರ ಜಪ, ವಿಷ್ಣು ಪಂಚಾಯತನ ಯಾಗ, ನಾರಾಯಣ ಅಷ್ಟಾಕ್ಷರಿ ಮಹಾಮಂತ್ರ ಹೋಮ, 33 ಕೆ.ಜಿ. ಮಾವಿನ ಹಣ್ಣಿನ ಅಭಿಷೇಕ ಹಾಗೂ ಸುವಾಸಿನಿಯರಿಂದ ಭವ್ಯ ಲಕ್ಷ ಕುಂಕುಮಾರ್ಚನೆ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವು ಬೆಳಿಗ್ಗೆ 6 ಗಂಟೆಗೆ ಶ್ರೀ ಹನುಮಂತ ದೇವರಿಗೆ 33 ಕೆ.ಜಿ. ಮಾವಿನ ಹಣ್ಣಿನ ಅಭಿಷೇಕದೊಂದಿಗೆ ಆರಂಭವಾಗಲಿದೆ. ನಂತರ ಬೆಳಿಗ್ಗೆ 8 ಗಂಟೆಗೆ ಧರ್ಮಧ್ವಜಾರೋಹಣ ನಡೆಯಲಿದ್ದು, ಗಂವ್ಹಾರ ತ್ರಿವಿಕ್ರಮಾನಂದ ಸರಸ್ವತಿ ಮಠದ ಸದ್ಗುರು ಸೋಪಾನನಾಥ ಮಹಾಸ್ವಾಮಿಗಳು, ಹಾಗೂ ಆನೆಗುಂದಿ ಮಹಾಸಂಸ್ಥಾನ ಸರಸ್ವತಿ ಪೀಠದ ಸುರೇಂದ್ರ ಮಹಾಸ್ವಾಮಿಗಳು, ಇವರಿಂದ ಧರ್ಮಧ್ವಜಾರೋಹಣ ನೆರವೇರಲಿದೆ. ಬೆಳಿಗ್ಗೆ 9 ಗಂಟೆಗೆ ನಾರಾಯಣ ಅಷ್ಟಾಕ್ಷರಿ ಮಹಾಮಂತ್ರ ಜಪ ಆರಂಭವಾಗಲಿದ್ದು, ಮಹಾಕಾಂತ ಮಹಾರಾಜ್ ಹಾಗೂ ಶ್ರೀ ಸದ್ಗುರು ಶಾಂತಾನಂದ ಸರಸ್ವತಿ ಬಾಬಾ ಮಹಾರಾಜ ಮಠ, ಕೂಡಲಗಿ ಹುಣಸಗಿ ತಾಲೂಕು ಇವರ ದಿವ್ಯ ಸಾನ್ನಿಧ್ಯದಲ್ಲಿ ಸಾವಿರಾರು ಭಕ್ತರು ಜಪದಲ್ಲಿ ಭಾಗವಹಿಸಲಿದ್ದಾರೆ.

ಬಳಿಕ ಬೆಳಿಗ್ಗೆ 11 ಗಂಟೆಗೆ ನಾರಾಯಣ ಅಷ್ಟಾಕ್ಷರಿ ಮಹಾಮಂತ್ರ ಹೋಮ ಮತ್ತು ವಿಷ್ಣು ಪಂಚಾಯತನ ಯಾಗ ನೆರವೇರಲಿದ್ದು, ದೈವಜ್ಞ ಭೂಷಣ ಸುರಪುರ ಪಂಚಾಂಗದ ಕರ್ತೃಗಳಾದ ಕೇದಾರನಾಥ್ ಶಾಸ್ತ್ರಿ ಯಾಳಗಿಕರ್ ಹಾಗೂ ಸಂತೋಷ್ ಸ್ವಾಮಿ ಮಹಾರಾಜ್, ಪೀಠಾಧಿಪತಿಗಳು, ಸಿಂಧನೂರು ಸಂಸ್ಥಾನ, ಸೇಡಂ ಇವರ ಸಾನ್ನಿಧ್ಯ ವಹಿಸಲಿದ್ದಾರೆ.

ಮಧ್ಯಾಹ್ನ 1 ಗಂಟೆಗೆ ಪೂರ್ಣಾಹುತಿ, ಮಹಾಮಂಗಳಾರತಿ ಹಾಗೂ ತೀರ್ಥಪ್ರಸಾದ ವಿತರಣೆ ನಡೆಯಲಿದೆ.ಸಂಜೆ 5 ಗಂಟೆಗೆ ಮಹಿಳೆಯರಿಂದ ಭವ್ಯ ಲಕ್ಷ ಕುಂಕುಮಾರ್ಚನೆ ಕಾರ್ಯಕ್ರಮ ಜರುಗಲಿದ್ದು, ಶ್ರೀ ಸದ್ಗುರು ದತ್ತಪ್ಪಯ್ಯ ಸ್ವಾಮಿಗಳು, ಪೀಠಾಧೀಶರು, ಶ್ರೀ ಸದ್ಗುರು ಭೀಮಾಶಂಕರ ಸ್ವಾಮಿ ಸಂಸ್ಥಾನ ಮಠ, ಸಿಂದಗಿ ಹಾಗೂ ಶ್ರೀ ಸಿದ್ದರಾಜು ಮಹಾಸ್ವಾಮಿಗಳು, ಯರಗಲ್ ಇವರ ದಿವ್ಯ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ನೆರವೇರಲಿದೆ. ಜಪದಲ್ಲಿ ಪಾಲ್ಗೊಳ್ಳುವ ಭಕ್ತರು ಬೆಳಿಗ್ಗೆ 8 ಗಂಟೆಯೊಳಗೆ ಆಗಮಿಸುವಂತೆ ಹಾಗೂ ಮಹಿಳೆಯರು ಲಕ್ಷ ಕುಂಕುಮಾರ್ಚನೆ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಮಿತಿಯವರು ಕೋರಿದ್ದಾರೆ. ಕುಂಕುಮಾರ್ಚನೆಗೆ ಅಗತ್ಯವಿರುವ ಪೂಜಾ ಸಾಮಗ್ರಿಗಳನ್ನು ದೇವಸ್ಥಾನದ ವತಿಯಿಂದ ಉಚಿತವಾಗಿ ಒದಗಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರೀಹರಿ, ಆದಿಶಕ್ತಿ ಹಾಗೂ ಶ್ರೀ ಜೈ ವೀರ ಹನುಮಂತನ ಕೃಪಾಶೀರ್ವಾದಕ್ಕೆ ಪಾತ್ರರಾಗಬೇಕೆಂದು ಮನವಿ ಮಾಡಿದ್ದಾರೆ.

# ಕಲಬುರಗಿ-ಬೆಂಗಳೂರು ವಿಮಾನ ಸೇವೆ ಪುನರಾರಂಭ ಹಿನ್ನೆಲೆ ಪ್ರವಾಸ ಮತ್ತು ಪ್ರವಾಸೋದ್ಯಮ ಏಜೆಂಟರೊಂದಿಗೆ ಕೆ.ಕೆ.ಸಿ.ಐ ಸಂವಾದ ಸಭೆ




ಕಲಬುರಗಿ:ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಕೆ.ಕೆ.ಸಿ.ಸಿ.ಐ) ವತಿಯಿಂದ ದಿನಾಂಕ 02-06-2026 ರಂದು ಬೆಳಿಗ್ಗೆ 11.30 ಗಂಟೆಗೆ ಕೆ.ಕೆ.ಸಿ.ಸಿ.ಐ ಸಭಾಂಗಣದಲ್ಲಿ ಕಲಬುರಗಿ ನಗರದ ಪ್ರವಾಸ ಮತ್ತು ಪ್ರವಾಸೋದ್ಯಮ ಏಜೆಂಟರೊಂದಿಗೆ ಸಂವಾದ ಸಭೆಯನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರಾದ ಶ್ರೀಮತಿ ಬೇಬಿ ಮೊಗರ್, ಸ್ಟಾರ್ ಏರ್ ದಕ್ಷಿಣ ಭಾರತ ಪ್ರಾಂತ್ರೀಯ ವ್ಯವಸ್ಥಾಪಕರಾದ ಶ್ರೀ ಮೊಹಮ್ಮದ್ ಸೋಹೈಲ್ ಅಹ್ಮದ್, ಕೆ.ಕೆ.ಸಿ.ಸಿ.ಐ ಅಧ್ಯಕ್ಷರಾದ ಶ್ರೀ ಶರಣಬಸಪ್ಪ ಎಂ. ಪಪ್ಪಾ, ಗೌರವ ಕಾರ್ಯದರ್ಶಿಗಳಾದ ಶ್ರೀ ಶಿವರಾಜ್ ವಿ. ಇಂಗಿನಶೆಟ್ಟಿ, ಪ್ರವಾಸೋದ್ಯಮ ಉಪಸಮಿತಿಯ ಅಧ್ಯಕ್ಷರಾದ ಶ್ರೀ ವಿನಯ್ ಚಿಕಟವಾರ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಸ್ವಾಗತಿಸಿ ಮಾತನಾಡಿದ ಕೆ.ಕೆ.ಸಿ.ಸಿ.ಐ ಗೌರವ ಕಾರ್ಯದರ್ಶಿ ಶ್ರೀ ಶಿವರಾಜ್ ವಿ. ಇಂಗಿನಶೆಟ್ಟಿ ಅವರು ಸಭೆಯ ಉದ್ದೇಶವನ್ನು ವಿವರಿಸಿ, ಜೂನ್ 10ರಿಂದ ಕಲಬುರಗಿ-ಬೆಂಗಳೂರು ನಡುವೆ ಸ್ಟಾರ್ ಏರ್ ವಿಮಾನ ಸೇವೆ ಪುನರಾರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಪ್ರವಾಸ ಮತ್ತು ಪ್ರವಾಸೋದ್ಯಮ ಏಜೆಂಟರೊಂದಿಗೆ ಸಂವಾದ ನಡೆಸಲು ಈ ಸಭೆ ಕರೆಯಲಾಗಿದೆ ಎಂದು ತಿಳಿಸಿದರು.

ಅಧ್ಯಕ್ಷೀಯ ಭಾಷಣ ಮಾಡಿದ ಶ್ರೀ ಶರಣಬಸಪ್ಪ ಎಂ. ಪಪ್ಪಾ ಅವರು ಸುಮಾರು ಎಂಟು ತಿಂಗಳ ಬಳಿಕಕಲಬುರಗಿಗೆ ವಿಮಾನ ಸೇವೆ ಪುನರಾರಂಭವಾಗುತ್ತಿರುವುದು ಈ ಭಾಗದ ಜನತೆಗೆ ಸಂತಸದ ವಿಷಯವಾಗಿದೆ ಎಂದರು. ವಿಮಾನ ಸೇವೆ ಮರುಪ್ರಾರಂಭಕ್ಕಾಗಿ ಕೆ.ಕೆ.ಸಿ.ಸಿ.ಐ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳೊಂದಿಗೆ ನಿರಂತರವಾಗಿ ಹಿಂಬಾಲನೆ ನಡೆಸಿದ್ದು, ರಾಜ್ಯ ಸರ್ಕಾರವು ಸ್ಟಾರ್ ಏರ್‌ಗೆ ವೈಯಬಿಲಿಟಿ ಗ್ಯಾಪ್ ಫಂಡಿಂಗ್ (ಗಿಉಈ) ಒದಗಿಸಿರುವುದರಿಂದ ಸೇವೆ ಪುನರಾರಂಭ ಸಾಧ್ಯವಾಗಿದೆ ಎಂದು ತಿಳಿಸಿದರು.

ಅವರು ಜಿಲ್ಲೆ ಜನರ ಅನುಕೂಲಕ್ಕಾಗಿ ವಿಮಾನ ಸಮಯವನ್ನು ಸಂಜೆ ವೇಳೆಯಿಂದ ಬೆಳಿಗ್ಗೆ ವೇಳೆಗೆ ಬದಲಾಯಿಸಿದ ಸ್ಟಾರ್ ಏರ್ ಸಂಸ್ಥೆಗೆ ಧನ್ಯವಾದಗಳನ್ನು ಸಲ್ಲಿಸಿದರು. ಅಲ್ಲದೇ ಕಲಬುರಗಿ ವಿಮಾನ ನಿಲ್ದಾಣದಲ್ಲಿ ವಲಸೆ (ಖಟಟಡುರಡಿಚಿಣುಂಟಿ) ಸೌಲಭ್ಯ ಸ್ಥಾಪಿಸಿ ಇನ್ನಷ್ಟು ವಿಮಾನ ಸಂಪರ್ಕ ಕಲ್ಪಿಸುವ ಅಗತ್ಯವಿದೆ ಎಂದು ತಿಳಿಸಿದರು. ಕಲ್ಯಾಣ ಕರ್ನಾಟಕ ಭಾಗದ ಪ್ರವಾಸೋದ್ಯಮ ಅಭಿವೃದ್ಧಿಗೆ ಪ್ರವಾಸೋದ್ಯಮ ಇಲಾಖೆ ವಿಶೇಷ ಗಮನ ಹರಿಸಬೇಕೆಂದು ಮನವಿ ಮಾಡಿದರು. ವಿಮಾನ ಸೇವೆ ಪುನರಾರಂಭಕ್ಕೆ ಅಗತ್ಯವಾದ ವಿ.ಜಿ.ಎಫ್ ನೆರವು ಒದಗಿಸಿದ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ಅವರಿಗೆ ಕೃತಜ್ಞತೆ ಸಲ್ಲಿಸಿದರು.

ಸ್ಟಾರ್ ಏರ್ ದಕ್ಷಿಣ ಭಾರತ ಪ್ರಾಂತ್ರೀಯ ವ್ಯವಸ್ಥಾಪಕರಾದ ಶ್ರೀ ಮೊಹಮ್ಮದ್ ಸೋಹೈಲ್ ಅಹ್ಮದ್ ಮಾತನಾಡಿ, ವಿಮಾನ ಸೇವೆ ಪುನರಾರಂಭಕ್ಕೆ ಕೆ.ಕೆ.ಸಿ.ಸಿ.ಐ ನೀಡಿದ ಸಹಕಾರ ಹಾಗೂ ಸರ್ಕಾರದೊಂದಿಗೆ ನಡೆಸಿದ ನಿರಂತರ ಸಂಪರ್ಕಕ್ಕೆ ಧನ್ಯವಾದ ಸಲ್ಲಿಸಿದರು. ಇಂದಿನ ಸಭೆಯ ಮೂಲಕ ಪ್ರವಾಸ ಏಜೆಂಟರೊಂದಿಗೆ ನೇರ ಸಂವಾದಕ್ಕೆ ಅವಕಾಶ ಕಲ್ಪಿಸಿರುವುದಕ್ಕಾಗಿ ಕೆ.ಕೆ.ಸಿ.ಸಿ.ಐ ಗೆ ಅಭಿನಂದನೆ ಸಲ್ಲಿಸಿದರು.

ಸಭೆಯಲ್ಲಿ ಪ್ರವಾಸ ಏಜೆಂಟರು ಗೋವಾ, ತಿರುಪತಿ, ದೆಹಲಿ (ಘಾಜಿಯಾಬಾದ್), ಅಹಮದಾಬಾದ್ ಹಾಗೂಜೈಪುರ ನಗರಗಳಿಗೆ ವಿಮಾನ ಸೇವೆ ಆರಂಭಿಸುವಂತೆ ಸಲಹೆ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಶ್ರೀ ಸೋಹೈಲ್ ಅಹ್ಮದ್ ಅವರು, ಕಲಬುರಗಿಯನ್ನು ಸ್ಟಾರ್ ಏರ್ ಸಂಸ್ಥೆಯ ಪ್ರಾದೇಶಿಕ ಹಬ್ ಆಗಿ ಅಭಿವೃದ್ಧಿಪಡಿಸುವ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು. ಇದರಿಂದ ಭವಿಷ್ಯದಲ್ಲಿ ಇನ್ನಷ್ಟು ನಗರಗಳಿಗೆ ವಿಮಾನ ಸಂಪರ್ಕ ಕಲ್ಪಿಸಲು ಸಾಧ್ಯವಾಗಲಿದೆ ಎಂದರು. ಪ್ರವಾಸ ಏಜೆಂಟರಿಂದ ಬಂದಿರುವ ಸಲಹೆಗಳನ್ನು ಸಂಸ್ಥೆ ಪರಿಶೀಲಿಸಿ ಸಾಧ್ಯತೆಗಳ ಅಧ್ಯಯನ ನಡೆಸಲಿದೆ ಎಂದು ತಿಳಿಸಿದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ಅಭಿಯಂತರರಾದ ಶ್ರೀ ಯೋಗೇಶ್ ಅವರು ಮಾತನಾಡಿ, ಕಲಬುರಗಿ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಪ್ರವಾಸೋದ್ಯಮ ಅಭಿವೃದ್ಧಿಗೆ ಕೆ.ಕೆ.ಸಿ.ಸಿ.ಐ ಕೈಗೊಂಡಿರುವ ಈ ಪ್ರಯತ್ನವನ್ನು ಶ್ಲಾಘಿಸಿದರು.

ಸನ್ನತಿ ಹಾಗೂ ಕಣಗನಹಳ್ಳಿ ಸೇರಿದಂತೆ ಅಶೋಕನ ಕಾಲದ ಐತಿಹಾಸಿಕ ತಾಣಗಳು ಜಾಗತಿಕ ಮಟ್ಟದಲ್ಲಿ ಮಹತ್ವ ಹೊಂದಿದ್ದು, ಉತ್ತಮ ವಿಮಾನ ಸಂಪರ್ಕವಿಲ್ಲದೆ ಪ್ರವಾಸೋದ್ಯಮ ಬೆಳೆಯಲು ಸಾಧ್ಯವಿಲ್ಲ ಎಂದರು. ಕಲಬುರಗಿ ವಿಮಾನ ನಿಲ್ದಾಣದಲ್ಲಿ ಪ್ರವಾಸೋದ್ಯಮ ಮಾಹಿತಿ ಕೇಂದ್ರ (ಕಿಯೋಸ್ಕ್) ಸ್ಥಾಪಿಸುವಂತೆ ಸಲಹೆ ನೀಡಿದರು.

ಪ್ರವಾಸ ಮತ್ತು ಪ್ರವಾಸೋದ್ಯಮ ಏಜೆಂಟರ ಸಂಘದ ಅಧ್ಯಕ್ಷರಾದ ಶ್ರೀ ಸಂದ್ಯಾರಾಜ್ ಅವರು ಮಾತನಾಡಿ, ಇಂದಿನ ಆನ್‌ಲೈನ್ ಸ್ಪರ್ಧಾತ್ಮಕ ಯುಗದಲ್ಲಿ ಪ್ರವಾಸ ಏಜೆಂಟರ ಪಾತ್ರ ಮಹತ್ವದ್ದಾಗಿದ್ದು, ಅವರಿಗೆ ವಿಶೇಷ

ರಿಯಾಯಿತಿಗಳು ಹಾಗೂ ಉತ್ತೇಜನ ನೀಡಿದರೆ ವಿಮಾನ ಸೇವೆಗಳ ಪ್ರಚಾರಕ್ಕೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಅಪ್ಪ ವಿಶ್ವವಿದ್ಯಾಲಯದ ಪ್ರವಾಸೋದ್ಯಮ ವಿಭಾಗದ ಅಧ್ಯಕ್ಷರಾದ ಡಾ. ಕಲ್ಯಾಣರಾವ್ ಪಾಟೀಲ್ ಅವರು ವಿದ್ಯಾರ್ಥಿಗಳಿಗೆ ಸ್ಟಾರ್ ಏರ್ ಸಂಸ್ಥೆಯಲ್ಲಿ ಇಂಟರ್ನ್ಶಿಪ್ ಅವಕಾಶ ಕಲ್ಪಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದ ಕೊನೆಯಲ್ಲಿ ಕೆ.ಕೆ.ಸಿ.ಸಿ.ಐ ಪ್ರವಾಸೋದ್ಯಮ ಉಪಸಮಿತಿ ಅಧ್ಯಕ್ಷರಾದ ಶ್ರೀ ವಿನಯ್ ಚಿಕಟವಾರ್ ವಂದಿಸಿದರು.

ಸಭೆಯಲ್ಲಿ ಕೆ.ಕೆ.ಸಿ.ಸಿ.ಐ ಸದಸ್ಯರಾದ ಮಂಜುನಾಥ ಜೇವರ್ಗಿ, ರವಿಶಂಕರ್ ಜಾಮದಾರಖಾನಿ, ಅಭಿಜಿತ್ ಪಡಶೆಟ್ಟಿ, ಜಗದೀಶ್ ಪಾಟೀಲ್, ರಾಹುಲ್ ತೆಂಗಳಿ, ರವಿ ಕೆ. ಪಾಟೀಲ್, ಶಾಂತರಡ್ಡಿ ಪೆಟ್ಟಿರೂರ್, ಅಮೃತ್ ಸಂಘವಿ ಸೇರಿದಂತೆ ಪ್ರವಾಸ ಮತ್ತು ಪ್ರವಾಸೋದ್ಯಮ ಏಜೆಂಟರು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಸಚಿವ ಎಂ.ಬಿ.ಪಾಟೀಲರಿಗೆ ಸನ್ಮಾನ ಸಮಾರಂಭ ನಾಳೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಸಚಿವ ಸಂಪುಟದಲ್ಲಿ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿ, ಪ್ರಥಮ ಬಾರಿಗೆ ವಿಜಯಪುರಕ್ಕೆ ಆಗಮಿಸುತ್ತಿರುವ ಸಚಿವ ಎಂ. ಬಿ. ಪಾಟೀಲರಿಗೆ ವಿಜಯಪುರ ಜಿಲ್ಲೆಯ ವಿವಿಧ ಸಂಘ–ಸಂಸ್ಥೆಗಳು ಮತ್ತು ನಾಗರಿಕರ ವತಿಯಿಂದ ಸನ್ಮಾನ ಸಮಾರಂಭ ಏರ್ಪಡಿಸಲಾಗಿದೆ.

ದಿ.6 ಶನಿವಾರ ನಗರದ ಪಾಟೀಲ ಗಾರ್ಡೇನಿಯಾದಲ್ಲಿ ಬೆ.11 ಗಂ. ನಡೆಯಲಿರುವ ಸಮಾರಂಭದಲ್ಲಿ ಪಕ್ಷದ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಹಿತೈಷಿಗಳು ಭಾಗವಹಿಸಿ ಸಚಿವ ಎಂ ಬಿ ಪಾಟೀಲ ಅವರನ್ನು ಸನ್ಮಾನಿಸಲಿದ್ದಾರೆ.

# ಮೌಲಾನಾ ಆಜಾದ್ ಮಾದರಿ ಶಾಲೆಗಳ ಪ್ರವೇಶ ಪರೀಕ್ಷೆ: ಪ್ರವೇಶ ಪತ್ರ ಪಡೆದುಕೊಳ್ಳಲು ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026–27ನೇ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳ 6ನೇ ತರಗತಿಯಿಂದ 9ನೇ ತರಗತಿಯವರೆಗೆ ಪ್ರವೇಶಾತಿಗಾಗಿ ಜೂನ್ 7ರಂದು ಪರೀಕ್ಷೆ ನಡೆಯಲಿದೆ. ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಮೌಲಾನಾ ಆಜಾದ್ ಮಾದರಿ ಶಾಲೆ ನಂ–01, ಕುಂಬಾರ ಗಲ್ಲಿ, ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆ ನಂ–02, ಟೇಕಡೆ ಗಲ್ಲಿ, ಶಾಲೆಗಳಿಂದಲೇ ನೇರವಾಗಿ ಪ್ರವೇಶ ಪತ್ರಗಳನ್ನು ಪಡೆದುಕೊಳ್ಳಬಹುದಾಗಿದೆ

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08352–295523 ಮತ್ತು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಚೇ–ರಿಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಅಂತಾರಾಷ್ಟ್ರೀಯ ಉತ್ಸವಕ್ಕೆ ಜಿಲ್ಲೆಯ ಕಲಾವಿದರಿಂದ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಂತಾರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ವಿವಿಧ ಸಾಂಸ್ಕೃತಿಕ ಉತ್ಸವ ಹಾಗೂ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಕಲಾ ತಂಡಗಳು ಮತ್ತು ಕಲಾವಿದರನ್ನು ಎಂಪೆನ್ನೆಲ್ ಮಾಡುವ ಸಲುವಾಗಿ ಜಿಲ್ಲೆಯ ಕಲಾವಿದರು ನಿಗದಿತ ಅರ್ಜಿ ನಮೂನೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಅರ್ಜಿ ಸಲ್ಲಿಸಬಹುದಾಗಿದೆ.

ಭಾರತೀಯ ಸಂಸ್ಕೃತಿ ಸಂಬಂಧಗಳ ಇಂಡಿಯನ್ ಕೌನ್ಸಿಲ್ ಕಲ್ಚರಲ್ ರಿಲೇಶನ್ಸ್ (ಐಸಿಸಿಆರ್) ಹಾಗೂ ಕರ್ನಾಟಕ ಸರ್ಕಾರದ ನಡುವೆ ಸಂಸ್ಕೃತಿ,ಕಲೆ ಹಾಗೂ ಶಿಕ್ಷಣಕ್ಕೆ ಸಂಬಂಧಿಸಿದಂತೆ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗಿದೆ.

ಹಾಗಾಗಿ ಐಸಿಸಿಆರ್ ಸಂಸ್ಥೆಯ ವತಿಯಿಂದ ರಾಜ್ಯ ಸರ್ಕಾರದ ಸಾಂಸ್ಕೃತಿಕ ಕಲಾತಂಡಗಳು ಹಾಗೂ ಕಲಾವಿದರನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ವಿವಿಧ ಸಾಂಸ್ಕೃತಿಕ ಉತ್ಸವ ಹಾಗೂ ಕಾರ್ಯಕ್ರಮಗಳಿಗೆ ಕಳುಹಿಸಿಕೊಡಲಾಗುವುದು. ಅದಕ್ಕಾಗಿ ಜಿಲ್ಲೆಯ ಕಲಾತಂಡಗಳು ಹಾಗೂ ಕಲಾವಿದರನ್ನು ಎಂಪೆನ್ನೆಲ್ ಮಾಡುವುದರೊಂದಿಗೆ ಅವರ ಪ್ರತಿಭೆಯನ್ನು ಪ್ರಚುರಪಡಿಸಲಾಗುವುದು. ಹಾಗಾಗಿ ಜಿಲ್ಲೆಯ ಕಲಾವಿದರು ಹಾಗೂ ಕಲಾತಂಡಗಳು ನಿಗದಿತ ನಮೂನೆಯನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರ, ಸ್ಟೇಷನ್ ರಸ್ತೆ, ವಿಜಯಪುರ ಇವರಿಗೆ ಜೂ. 12 ರೊಳಗೆ ಅರ್ಜಿ ಸಲ್ಲಿಸಿ ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ. ಅರ್ಜಿ ನಮೂನೆ ಇಲಾಖೆಯ ವೆಬ್ ಸೈಟ್ :www.kannadasiri.karnataka.gov.in ನಲ್ಲಿದೆ. ಅದನ್ನು ಡೌನ್ ಲೋಡ್ ಮಾಡಿಕೊಂಡು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08352–251261 ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಲ್ಹಾರದಲ್ಲಿ ಇಂದು ಸಸಿ ನೆಡುವ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಮಾಜಿ ಸಚಿವ ಎಸ್. ಕೆ. ಬೆಳ್ಳುಬ್ಬಿ ಅವರ ಜನ್ಮದಿನ, ವಿಶ್ವ ಪರಿಸರ ದಿನ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ 'ಏಕ್ ಪೆಡ್ ಮಾ ಕೆ ನಾಮ್' ಅಭಿಯಾನದ ಅಂಗವಾಗಿ ಶುಕ್ರವಾರ (ಜೂನ್ 5) ಬೆಳಿಗ್ಗೆ 11 ಗಂಟೆಗೆ ಪಟ್ಟಣದ ವಿಶ್ವ ಭಾರತಿ ವಿದ್ಯಾ ವರ್ಧಕ ಸಂಘದ ಯಲ್ಲಮ್ಮ ದೇವಿ ಸಿಬಿಎ ಶಾಲಾ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಅವರ ಸೂಚನೆಯಂತೆ, ಅಭಿಮಾನಿಗಳು ಯಾವುದೇ ಆಡಂಬರಗಳನ್ನು ತೊರೆದು ಶಾಲು, ಹೂವುಗಳ ಬದಲು ಸಸಿಗಳನ್ನು ನೆಡುವ ಮೂಲಕ ಶುಭಾಶಯ ಕೋರಬೇಕು ಎಂದು ಎಸ್.ಕೆ. ಬೆಳ್ಳುಬ್ಬಿ ಅಭಿಮಾನಿ ಬಳಗ ಪ್ರಕಟಣೆಯಲ್ಲಿ ತಿಳಿಸಿದೆ.

# ಸಾಮೂಹಿಕ ಹತ್ಯೆ ಪ್ರಕರಣ: ಮತ್ತೆ ಆರು ದುಷ್ಕರ್ಮಿಗಳ ಬಂಧನ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯ ಜನತೆಯನ್ನು ಬೆಚ್ಚಿಬೀಳಿಸಿದ ಚಡಚಣ ತಾಲೂಕು ಗೋವಿಂದಪೂರ ಗ್ರಾಮದಲ್ಲಿ ನಡೆದ ಸಾಮೂಹಿಕ ಹತ್ಯೆ ಪ್ರಕರಣದಲ್ಲಿ ಗುರುವಾರ ಮತ್ತೆ ಆರು ಜನ ಆರೋಪಿತರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಆರೋಪಿ ನಂ. 1 :

ಅಪ್ಪುಗೌಡ ತಂ. ಲಗಮನಗೌಡ @ ಲಕ್ಕನಗೌಡ ಪಾಟೀಲ (49 ವರ್ಷ), ಆರೋಪಿ ನಂ. 11 ಶಂಕ್ರೆಪ್ಪ ತಂ. ಮಾದೇವ ಅರಕೇರಿ ( 33 ವರ್ಷ), ಆರೋಪಿ ನಂ. 12 ಅಪ್ಪಾಸಾಬ @ ಕಿಶನ್ ತಂ. ಶಂಕರ ಭೋವಿ )56 ವರ್ಷ), ಆರೋಪಿ ನಂ. 22 ಸತ್ಯೆಪ್ಪ ತಂ. ಜಕ್ಕಪ್ಪ ಬಿರಾದಾರ (46 ವರ್ಷ), ಆರೋಪಿ ನಂ. 23 ಸುಲ್ತಾನ ತಂ. ಮಾದೇವ ಬಿರಾದಾರ (24 ವರ್ಷ), ಆರೋಪಿ ನಂ. 24 ಮಹೇಶ ತಂ. ಬೆಳ್ಳೆಣ್ಣಿ ಬಿರಾದಾರ (25 ವರ್ಷ) ಆರೋಪಿಗಳನ್ನು ಬಂಧಿಸಲಾಗಿದ್ದು, ಈಗಾಗಲೇ ದಿನಾಂಕ: 01–06–2026 ರಂದು 12 ಜನ ಆರೋಪಿತರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದ್ದು, ಹೀಗೆ ಈ ಪ್ರಕರಣದಲ್ಲಿ ಇದುವರೆಗೆ ಒಟ್ಟು 18 ಜನ ಆರೋಪಿತರ ಬಂಧನ ಪ್ರಕ್ರಿಯೆ ಪೂರ್ಣಗೊಳಿಸಲಾಗಿರುತ್ತದೆ ಎಂದು ಪೋಲೀಸ್ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಪತ್ರಕರ್ತ ದೀಪಕ್ ಶಿಂತ್ರೆಗೆ "ಪತ್ರಕರ್ತ ಭೂಷಣ" ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಲವು ವರ್ಷಗಳಿಂದ ಪ್ರಾಮಾಣಿಕ, ನಿಷ್ಪಕ್ಷಪಾತ ಹಾಗೂ ಸಮಾಜಮುಖಿ ಸೇವೆ ಸಲ್ಲಿಸುತ್ತಿರುವ ವಿಜಯಪುರದ ಹಿರಿಯ ಪತ್ರಕರ್ತ ದೀಪಕ್ ಶಿಂತ್ರೆ ಅವರಿಗೆ ಸೊಲಾಪುರದ ಸ್ಟಾರ್ ನ್ಯೂಸ್ ಚಾನೆಲ್ ವತಿಯಿಂದ ನೀಡಲಾಗುವ "ಪತ್ರಕರ್ತ ಭೂಷಣ" ಪ್ರಶಸ್ತಿ ಘೋಷಿಸಲಾಗಿದೆ.

ದೀಪಕ್ ಶಿಂತ್ರೆ ಅವರು ಹಲವು ವರ್ಷಗಳಿಂದ ಕರ್ನಾಟಕರಾಜ್ಯದಲ್ಲಿವಾಸವಿದ್ದು,ಮರಾಠಿ ಪತ್ರಿಕೋದ್ಯಮಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಕರ್ನಾಟಕದ ಸಾಮಾಜಿಕ, ರಾಜಕೀಯ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಜಿಲ್ಲೆಯ ವಿವಿಧ ವಿಷಯಗಳ ಕುರಿತು ಅವರು ನಿರಂತರವಾಗಿ ವರದಿಗಾರಿಕೆ ನಡೆಸಿದ್ದಾರೆ. ಮರಾಠಿ ದಿನಪತ್ರಿಕೆಗಳಿಗೆ ಸುದ್ದಿಗಳನ್ನು ಪೂರೈಸುವ ಸಂದರ್ಭದಲ್ಲಿ ಕನ್ನಡ ಭಾಷೆ, ಸಂಸ್ಕೃತಿ ಹಾಗೂ ಕರ್ನಾಟಕದ ಸ್ವಾಭಿಮಾನಕ್ಕೆ ಸದಾ ಗೌರವ ನೀಡುತ್ತಾ ಕಾರ್ಯನಿರ್ವಹಿಸಿದ್ದಾರೆ.

ವಿಶೇಷವಾಗಿ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳ ಗಡಿ ಭಾಗದ ಸೂಕ್ಷ್ಮ ವಿಚಾರಗಳು, ಭಾಷಾ ಸಂಬಂಧಿತ ವಿಷಯಗಳು ಹಾಗೂ ಜನರ ಸಮಸ್ಯೆಗಳ ಕುರಿತು ವರದಿಗಾರಿಕೆ ಮಾಡುವಾಗ ಅತ್ಯಂತ ಸಂಯಮ, ಸಮತೋಲನ ಮತ್ತು ಜವಾಬ್ದಾರಿಯುತ ನಿಲುವು ತಾಳಿದ್ದಾರೆ.

ಅವರ ದೀರ್ಘಕಾಲೀನ ಪತ್ರಿಕೋದ್ಯಮ ಸೇವೆ, ಸಾಮಾಜಿಕ ಕಳಕಳಿ ಹಾಗೂ ಜನಹಿತದ ವರದಿಗಾ–ರಿಕೆಯನ್ನು ಗೌರವಿಸಿ ಸ್ಟಾರ್ ನ್ಯೂಸ್ ಚಾನೆಲ್, ಸೊಲಾಪುರ ವತಿಯಿಂದ "ಪತ್ರಕರ್ತ ಭೂಷಣ" ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಜೂನ್ 7ರಂದು ಭಾನುವಾರ ಆಯೋಜಿಸಲಾಗಿರುವ ವಿಶೇಷ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು ಎಂದು ಸ್ಟಾರ್ ನ್ಯೂಸ್ ಚಾನೆಲ್‌ನ ಮುಖ್ಯ ಸಂಪಾದಕರಾದ ನಂದಕುಮಾರ್ ವಾರೆ ತಿಳಿಸಿದ್ದಾರೆ. ಈ ಸಮಾರಂಭದಲ್ಲಿ ಸೊಲಾಪುರದ ನಿವೃತ್ತ ಸಹಾಯಕ ಪೊಲೀಸ್ ಆಯುಕ್ತ ರಾಜನ್ ಮಾನೆ, ಸೊಲಾಪುರ ನಗರ ಅಪರಾಧ ಶಾಖೆಯ ಹಿರಿಯ ಪೊಲೀಸ್ ನಿರೀಕ್ಷಕ ಅರವಿಂದ ಮಾನೆ, ಸೊಲಾಪುರ ಶ್ರಮಿಕ ಪತ್ರಕರ್ತರ ಸಂಘದ ಅಧ್ಯಕ್ಷ ವಿಕ್ರಂ ಖೇಲಬುಡೆ ಅವರ ಪ್ರಮುಖ ಉಪಸ್ಥಿತಿಯಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದು ನಂದಕುಮಾರ್ ವಾರೆ ಮಾಹಿತಿ ನೀಡಿದ್ದಾರೆ.

# ಪರಿಸರ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಇಂದು

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ತಾಲೂಕಾ ಛಾಯಾಚಿತ್ರ ಗ್ರಾಹಕರ ಸಂಘ (ರಿ), ಜಮಖಂಡಿ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಜಾಗೃತಿ ಕಾರ್ಯಕ್ರಮ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ಹುಲ್ಯಾಳ ಗ್ರಾಮದ ಶ್ರೀ ಗುರು ಶಂಭುಲಿಂಗೇಶ್ವರ ಮಾಧ್ಯಮಿಕ ಶಾಲೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವು ರೇಣುಕಸದಾಶಿವ ಶಿವಾಚಾರ್ಯ ಮಹಾಸ್ವಾಮಿಗಳು, ಯೋಗಾಶ್ರಮ ಹುಲ್ಯಾಳ ಅವರ ಸಾನಿಧ್ಯದಲ್ಲಿ ಹಾಗೂ ಹರ್ಷಾನಂದ ಮಹಾಸ್ವಾಮಿಗಳು, ಗುರು ದೇವಾಶ್ರಮ ಹುಲ್ಯಾಳ ಅವರ ಸಾನಿಧ್ಯದಲ್ಲಿ ನಡೆಯಲಿದೆ.

ಕಾರ್ಯಕ್ರಮವನ್ನು ವಿಶ್ರಾಂತ ತಹಶೀಲ್ದಾರರಾದ ಬಿ.ಎಲ್. ಗೋಠೆ ಅವರು ಉದ್ಘಾಟಿಸಲಿದ್ದು, ಜಮಖಂಡಿ ತಾಲೂಕಾ ಛಾಯಾಚಿತ್ರಗ್ರಾಹಕರ ಸಂಘದ ಅಧ್ಯಕ್ಷರಾದ ಹಾಸಿಮ್ ಅ. ಜಮಖಂಡಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಶ್ರೀಮತಿ ಎಸ್.ಎಂ. ಆನಿ ಮುಖ್ಯೋಪಾಧ್ಯಾಯರು, ಶ್ರೀ ಗುರು ಶಂಭುಲಿಂಗೇಶ್ವರ ಮಾಧ್ಯಮಿಕ ಶಾಲೆ, ಶಿವಪ್ಪ ಸೋರಗಾಂವಿ ಅಧ್ಯಕ್ಷರು, ಸುರೇಶ ಶಂ. ಕಡಪಳ್ಳಿ ಪಿ.ಡಿ.ಓ. ಹಾಗೂ ಉಪಾಧ್ಯಕ್ಷರಾದ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಶ್ರೀಶೈಲ ಭೂಮಾರ ಅಧ್ಯಕ್ಷರು, ತಾಲೂಕಾ ರೈತ ಸಂಘ, ಗುರುನಾಥ ಸುತಾರ ವಿಶ್ರಾಂತ ಶಿಕ್ಷಕರು ಹಾಗೂ ಸಾಹಿತಿಗಳು, ಪಂಡಿತಪ್ಪ ಮ. ಝುಲಪಿ ನ್ಯಾಯವಾದಿಗಳು, ರತ್ನಯ್ಯ ಅ. ಮಠಪತಿ ಹಾಗೂ ಅರುಣ ಬ. ಶಿವಶಿಂಪಿ ಹರ್ಷಾ ಎಂಟರ್‌ಪ್ರೈಸಸ್ ಭಾಗವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಶ್ರೀ ಗುರು ಶಂಭುಲಿಂಗೇಶ್ವರ ಮಾಧ್ಯಮಿಕ ಶಾಲೆಯ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಗುವುದು.

ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಸಸಿ ನೆಡುವ ಕಾರ್ಯಕ್ರಮವೂ ನಡೆಯಲಿದ್ದು, ಸಾರ್ವಜನಿಕರು, ಸಂಘದ ಸದಸ್ಯರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಮಖಂಡಿ ತಾಲೂಕಾ ಛಾಯಾಚಿತ್ರಗ್ರಾಹಕರ ಸಂಘದ ಪದಾಧಿಕಾ–ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿರಿಧಾನ್ಯ ಪೌಡರ್ ಮಹತ್ವ ತಿಳಿಸುವ ಕಾರ್ಯಕ್ರಮ :ನಾಗರಾಜ್

■ ಉದಯರಶ್ಮಿ ದಿನಪತ್ರಿಕೆ




ಎಚ್.ಡಿ.ಕೋಟೆ: ಮಣ್ಣು, ನೀರು, ರೈತ ಉಳಿಯಬೇಕು. ಮನುಷ್ಯನಿಗೆ ಉತ್ತಮ ಆರೋಗ್ಯ ಸಿಗಬೇಕೆಂಬ ನಿಟ್ಟಿನಲ್ಲಿ ಸಿರಿಧಾನ್ಯ ಪೌಡರ್ ನ ಮಹತ್ವವನ್ನು ಜನರಿಗೆ ತಿಳಿಸುವ ಕೆಲಸವನ್ನು ಮಾಡುತ್ತಿದ್ದೇವೆ ಎಂದು ಉದ್ಯಮಿ ಮಿಲ್ ನಾಗರಾಜ್ ಹೇಳಿದರು.

ತಾಲೂಕಿನ ಪಡುಕೋಟೆಯಲ್ಲಿ (ಇಂದಿರಾನಗರ) ಸಮತಾ ಟ್ರಸ್ಟ್ (ರಿ), ನಂಬಿಕೆ ಫುಡ್ ಪ್ರಾಡಕ್ಟ್ ಪ್ರೈವೇಟ್ (ಲಿ), ಸ್ವಾರಲಯ ಮ್ಯೂಸಿಕಲ್ ಟ್ರಸ್ಟ್, ಗಾನವಿ ಮೆಡಿಕಲ್ ಅಂಡ್ ಜನರಲ್ ಇಂದಿರಾನಗರ ಸಂಯುಕ್ತಾಶ್ರಯದಲ್ಲಿ ರಾಜಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜನ್ಮದಿನದ ಅಂಗವಾಗಿ ಆರೋಗ್ಯ ತಪಾಸಣೆ ಶಿಬಿರ ಹಾಗೂ ನಂಬಿಕೆ ಸಿರಿಧಾನ್ಯ ಪೌಡರ್ (ಬಾದಾಮಿ ಹಾಲು) ಮಹತ್ವವನ್ನು ಕುರಿತು ಮಾತನಾಡಿದರು.

ಮನುಷ್ಯ ದಿನನಿತ್ಯ ಸೇವಿಸುತ್ತಿರುವ ಆಹಾರ ವಿಷಪೂ–ರಿತವಾಗಿದ್ದು ಚಿಕ್ಕ ವಯಸ್ಸಿಗೆ ಹಲವಾರು ರೋಗಗಳು ಬರುತ್ತಿವೆ. ಕಡಿಮೆ ಅವಧಿಯಲ್ಲಿ ಹೆಚ್ಚಿನ ಇಳುವರಿ ಆಸೆಗಾಗಿ ಬಿತ್ತನೆ ಬೀಜಗಳಿಗೆ ರೈತರು ರಾಸಾಯನಿಕ ಗೊಬ್ಬರ ಹಾಗೂ ಔಷಧಿಗಳನ್ನು ಸಿಂಪಡಿಸುತ್ತಿದ್ದಾರೆ. ಆದರೆ ನಮ್ಮ ನಂಬಿಕೆ ಸಿರಿಧಾನ್ಯ ಪೌಡರ್ ನಲ್ಲಿ 9 ತರಹದ ನೈಸರ್ಗಿಕ ಧಾನ್ಯಗಳನ್ನ ಬಳಸಿ ಪೌಡರ್ ಅನ್ನು ತಯಾರಿಸುತ್ತಿದ್ದು ಇದು ಆರೋಗ್ಯದ ದೃಷ್ಟಿಯಿಂದ ತುಂಬಾ ಒಳ್ಳೆಯದು. ಇದನ್ನ ಬಳಸಿ ಎಲ್ಲರೂ ಆರೋಗ್ಯವನ್ನ ಚೆನ್ನಾಗಿ ಇಟ್ಟಿಕೊಳ್ಳಿ ಎಂದು ತಿಳಿಸಿದರು.

ಡಾ. ಪುನೀತ್ ರಾಜಕುಮಾರ್ ಮರಣ ಹೊಂದಿ ಇಂದಿಗೆ ನಾಲ್ಕು ವರ್ಷ ಕಳೆದಿದೆ.ಪ್ರತಿ ತಿಂಗಳ 29ನೇ ತಾರೀಕು ಸಿರಿಧಾನ್ಯ ಪೌಡರ್ ಹಾಲನ್ನು ವಿತರಣೆ ಮಾಡುವುದರ ಮೂಲಕ ಸಿರಿಧಾನ್ಯ ಬಳಕೆಯ ಮಹತ್ವ ಹಾಗೂ ಸೇವೆಯನ್ನು ಮಾಡುತ್ತಿದ್ದೇವೆ ಎಂದು ಹೇಳಿದರು.

ಆದಿ ಕರ್ನಾಟಕ ಮಹಾಸಭಾ ಅಧ್ಯಕ್ಷ ಹೈರಿಗೆ ಶಿವರಾಜ್ ಮಾತನಾಡಿ, ನಮ್ಮ ಮೈಸೂರಿನ 24ನೇ ದೊರೆ ನಾಲ್ವಡಿಯವರು. ಕನ್ನಂಬಾಡಿ ಕಟ್ಟೆ, ಕಬ್ಬಿಣ ಮತ್ತು ಉಕ್ಕು ಕಾರ್ಖಾನೆನಿರ್ಮಾಣ,ರೈಲುಮಾರ್ಗ,ವಿದ್ಯುತ್,ಸಾಬೂನು ತಯಾರಿಕಾ ಘಟಕ ಸ್ಥಾಪನೆ ಮಾಡಿದ ಕೀರ್ತಿ ನಾಲ್ವಡಿ ಕೃಷ್ಣರಾಜ ಒಡೆಯರಿಗೆ ಸಲ್ಲುತ್ತದೆ. ರೈತರಿಗೆ ಬಡವರಿಗೆ ವಿದ್ಯಾರ್ಥಿಗಳಿಗೆ ಉತ್ತಮ ಆಡಳಿತವನ್ನು ಕೊಟ್ಟ ಧೀಮಂತ ನಾಯಕ ಇಂತಹ ನಾಯಕರ ಜನ್ಮ ದಿನದಲ್ಲಿ ಆರೋಗ್ಯ ತಪಾಸಣಾ ಶಿಬಿರ ಹಾಗೂ ಆರೋಗ್ಯದ ದೃಷ್ಟಿಯಿಂದ 10 ವರ್ಷದಿಂದ ಮಿಲ್ ನಾಗರಾಜು ಅವರು ಪ್ರಕೃತಿಯಲ್ಲಿ ಬೆಳೆಯುವ ಸಿರಿಧಾನ್ಯಗಳ ಮೂಲಕ ಬಾದಾಮಿ ಪೌಡರ್ ತಯಾರಿಸಿದ್ದು ಎಲ್ಲರೂ ಟೀ, ಕಾಫಿ,ಸಾರಾಯಿ ಕುಡಿಯೋ ಬದಲು ಬಾದಾಮಿ ಪೌಡರ್ ನ ಹಾಲನ್ನು ಕುಡಿದು ಆರೋಗ್ಯವನ್ನು ಚೆನ್ನಾಗಿ ಕಾಪಾಡಿಕೊಳ್ಳಬೇಕು ಎಂದು ಸಲಹೆ ಹೇಳಿದರು. ಎಚ್.ಡಿ ಕೋಟೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ವ್ಯವಸ್ಥಾಪಕ ಪ್ರವೀಣ್ ಗೌಡರ್, ಸಮತಾ ಟ್ರಸ್ಟ್ ಅಧ್ಯಕ್ಷ ಮಲಾರ ರವೀಂದ್ರ, ಸ್ವರಾಲಯ ಮ್ಯೂಸಿಕಲ್ ಟ್ರಸ್ಟ್ ಅಧ್ಯಕ್ಷ ಸಿದ್ದರಾಜು, ಐಡಿಯಾ ವೆಂಕಟೇಶ್, ಭಜರಂಗಿ ವಿನಯ್, ಕುಮಾರಸ್ವಾಮಿ, ನಾಗೇಶ್, ಸೋಮು, ನವೀನ್, ಮರಿಲಿಂಗಯ್ಯ, ಅಶೋಕ್ ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

# ಚಡಚಣ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಲು ತಾಲೂಕು ಕೆಕೆಎಂಪಿ ಅಧ್ಯಕ್ಷ ಅಂಬಾದಾಸ ಸಿಂದಗಿ ಕರೆ

## ಜೂ.7ರಂದು ಶಿವಾಜಿ ಮಹಾರಾಜರ ಜಯಂತೋತ್ಸವ & ಜಿಲ್ಲಾ ಸಮಾವೇಶ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಕರ್ನಾಟಕ ಕ್ಷತ್ರಿಯ ಮರಾಠ ಪರಿಷತ್(ಕೆಕೆಎಂಪಿ)ಬೆಂಗಳೂರು,ವಿಜಯಪುರ ಜಿಲ್ಲಾ ಶಾಖೆಯ ವತಿಯಿಂದ ಛತ್ರಪತಿ ಶಿವಾಜಿ ಮಹಾರಾಜರ 399ನೇ ಜಯಂತೋತ್ಸವ ಹಾಗೂ ಜಿಲ್ಲಾ ಸಮಾವೇಶವನ್ನು ಜೂನ್ 7ರಂದು ವಿಜಯಪುರ ನಗರದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುವದು ಎಂದು ಚಡಚಣ ತಾಲೂಕು ಕೆಕೆ–ಎಂಪಿ ಅಧ್ಯಕ್ಷ ಅಂಬಾದಾಸ ಸಿಂದಗಿ ಹೇಳಿದರು.

ವಿಜಯಪುರ ನಗರದ ಆಶ್ರಮ ರಸ್ತೆಯ ಐಶ್ವರ್ಯ ನಗರದಲ್ಲಿ ನಿರ್ಮಾಣ ಹಂತದಲ್ಲಿರುವ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಸುಸಜ್ಜಿತ ಸಮುದಾಯ ಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮ ನಡೆಯಲಿದೆ. ಸಮಾರಂಭದ ದಿವ್ಯ ಸಾನಿಧ್ಯವನ್ನು ಮಂಜುನಾಥ ಭಾರತಿ ಸ್ವಾಮೀಜಿ, ಗೋಸಾಯಿ ಮಠ, ಗವಿಪುರಂ (ಬೆಂಗಳೂರು) ವಹಿಸಲಿದ್ದು, ಕರ್ನಾಟಕ ಕ್ಷತ್ರಿಯ ಮರಾಠ ಪರಿಷತ್ ರಾಜ್ಯಾಧ್ಯಕ್ಷ ಸುರೇಶರಾವ್ ಎಸ್. ಸಾಠೆ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ರಾಜ್ಯದ ಸಚಿವರು, ಸಂಸದರು, ಶಾಸಕರು, ವಿವಿಧ ಜಿಲ್ಲೆಗಳ ಹಾಗೂ ತಾಲೂಕುಗಳ ಕೆಕೆಎಂಪಿ ಪದಾಧಿಕಾರಿಗಳು, ಸಮಾಜದ ಮುಖಂಡರು ಮತ್ತು ಗಣ್ಯರು ಭಾಗವಹಿಸಲಿದ್ದಾರೆ.

ಜಿಲ್ಲಾ ಸಮಾವೇಶದ ಅಂಗವಾಗಿ ಸಮಾಜದ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನ, ವೃದ್ಧಾಪ್ಯ ವೇತನ, ಅಂಗವಿಕಲ ವೇತನ ಹಾಗೂ ವಿಧವಾ ವೇತನ ವಿತರಣೆ ಕಾರ್ಯಕ್ರಮವೂ ಹಮ್ಮಿಕೊಳ್ಳಲಾಗಿದೆ.

ಛತ್ರಪತಿ ಶಿವಾಜಿ ಮಹಾರಾಜರ ಆದರ್ಶಗಳು ಯುವಜನತೆಗೆ ಸ್ಫೂರ್ತಿದಾಯಕವಾಗಿದ್ದು, ಸಮಾಜದ ಸಂಘಟನೆ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ಇಂತಹ ಸಮಾವೇಶಗಳು ಸಹಕಾರಿಯಾಗಲಿವೆ ಆದ್ದರಿಂದ ಚಡಚಣ ತಾಲೂಕಿನ ಎಲ್ಲಾ ಮರಾಠಾ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಚಡಚಣ ತಾಲೂಕು ಕೆಕೆ–ಎಂಪಿ ಅಧ್ಯಕ್ಷ ಅಂಬಾದಾಸ ಸಿಂದಗಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧ್ಯಕ್ಷ ಬಿ.ಬಿ. ಶಿವಾಳ್ಕರ (7676573249) ಹಾಗೂ ಚಡಚಣ ತಾಲೂಕು ಅಧ್ಯಕ್ಷ ಅಂಬಾದಾಸ ಸಿಂದಗಿ (9743424101) ಅವರನ್ನು ಸಂಪರ್ಕಿಸಬಹುದು.

# ಜೂ.8ರಂದು ನ್ಯಾಯಾಧೀಕರಣದ ತೀರ್ಪಿನ ಕುರಿತು ವಿಚಾರ ಸಂಕಿರಣ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ನ್ಯಾ॥ ಬ್ರಿಜೇಶಕುಮಾರ ನೇತೃತ್ವದ 2ನೇ ನ್ಯಾಯಾಧೀಕರಣದ ತೀರ್ಪಿನಂತೆ ಆಲಮಟ್ಟಿ ಲಾಲ್ ಬಹದ್ದೂರ ಶಾಸ್ತ್ರಿ ಜಲಾಶಯದ ನೀರಿನ ಮಟ್ಟವನ್ನು 519.60ಮೀ ದಿಂದ 524.256ಮೀಗೆ ನೀರು ನಿಲ್ಲಿಸಲು ಗೇಟ್ ಅಳವಡಿಸುವಂತೆ ಹಾಗೂ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸುವದು ನೀರಿನ ಹಂಚಿಕೆಯಲ್ಲಿ ಅವಳಿ ಜಿಲ್ಲೆಯ ರೈತ–ರಿಗೆ ಆದ ಅನ್ಯಾಯದ ಕುರಿತು ವಿಚಾರ ಸಂಕಿರಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ರೈತ ಮುಖಂಡರಾದ ಅರವಿಂದ ಕುಲಕರ್ಣಿ ಹಾಗೂ ಮಹಾದೇವಪ್ಪ ತೇಲಿ ತಿಳಿಸಿದ್ದಾರೆ.

ಗುರುವಾರದಂದು ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಕರೆದಿದ್ದ ಮಾಧ್ಯಮ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಮುಖಂಡರು, ವಿಜಯಪುರ ಜಲ್ಲೆಯಲ್ಲಿ ಐದು ನದಿಗಳು ಹರಿದಿದ್ದು ಪಂಚನದಿಗಳ ಬೀಡು 2ನೇ ಪಂಜಾಬ ಎಂದು ಕರೆಯಲಾಗುತ್ತಿದೆ. ಆದ–ರೆ ಇದು ಕೇವಲ ಪ್ರತಿಷ್ಠೆಗೋಸ್ಕರ ಇದೊಂದು ವಿಷಯ ಹೇಳಿಕೊಳ್ಳಲು ಸುಲಭವಾಗಿದೆ. ಆದರೆ ವಾಸ್ತವಿಕವಾಗಿ ಜಿಲ್ಲೆಯ ಇನ್ನು ಕೆಲವು ಭಾಗಗಳಲ್ಲಿ ಕುಡಿಯಲು ಕೂಡಾ ನೀರು ಇಲ್ಲದಂತ ಪರಿಸ್ಥಿತಿ ನಿರ್ಮಾಣವಾಗಿದೆ. ಕೃಷಿಗೆ ನೀರು ಕೊಡುವುದಂತು ದೂರದ ಮಾತು, ಕುಡಿಯಲು ಹಾಗೂ ಬೆಳೆಗಳಿಗೆ ನೀರು ಬೇಕಾದಾಗ ಹೋರಾಟ ಮಾಡಿಯೇ ನೀರು ಪೂರೈಸಿಕೊಳ್ಳುವುದು ನಮ್ಮ ಜಿಲ್ಲೆಯ ರೈತರ ದೌರ್ಭಾಗ್ಯವಾಗಿದೆ. ಲಾಲ್ ಬಹದ್ದೂರ ಶಾಸ್ತ್ರಿ ಆಣೆಕಟ್ಟು ನಿರ್ಮಿಸಿದ್ದು, ನಮ್ಮ ಜಿಲ್ಲೆಯ ಆಲಮಟ್ಟಿಯಲ್ಲಿ ಲಕ್ಷಾಂತರ ಎಕರೆ ಜಮೀನು ಮನೆಗಳನ್ನು ಕಳೆದುಕೊಂಡು ತ್ಯಾಗ ಮಾಡಿದ ರೈತರು, ಸರ್ಕಾರ ಕೊಟ್ಟ ಪಡಿಗಾಸು ತಗೆದುಕೊಂಡು ಭೂಮಿ ಇಲ್ಲದೆ ಬೇರೆ ರಾಜ್ಯಗಳಿಗೆ ಗುಳೆ ಹೋಗುವುದು ಸಾಮಾನ್ಯವಾಗಿದೆ. ನಮ್ಮ ಜಿಲ್ಲೆಯ ಜನಪ್ರತಿನಿಧಿಗಳ ಇಚ್ಛಾಶಕ್ತಿ ಕೊರತೆಯಿಂದ ಇಲ್ಲಿಯವರೆಗೂ ಜಿಲ್ಲೆಯನ್ನು ಸಮಗ್ರ ನೀರಾವರಿಗೊಳಪಡಿಸಲು ವಿಫಲರಾಗಿದ್ದಾರೆ.

ಸನ್ 2010 ರಲ್ಲಿ ನ್ಯಾ॥ ಬ್ರಜೇಶಕುಮಾರ ನೇತೃತ್ವದ 2ನೇ ನ್ಯಾಯಾಧೀಕರಣ ಮಧ್ಯಂತರ ತೀರ್ಪು ನೀಡಿತು. 2013 ರಲ್ಲಿ ಅಂತಿಮ ತೀರ್ಪು ನೀಡಿ ಜಲಾಶಯದ ನೀರಿನ ಮಟ್ಟವನ್ನು 519.60 ಮೀಟರನಿಂದ 524.256ಕ್ಕೆ ನೀರು ನಿಲ್ಲಿಸಲು ಅನುಮತಿ ನೀಡಿತು. ನ್ಯಾಯಾಧೀಕರಣ ಅನುಮತಿ ನೀಡಿ 13ನೇ ವರ್ಷಕ್ಕೆ ಪಾದಾರ್ಪಣೆ ಮಾಡಿದೆ. ಆದರೆ ಇಲ್ಲಿಯವರೆಗೂ ಜಲಾಶಯದ ನೀರಿನ ಮಟ್ಟವನ್ನು ಹೆಚ್ಚಿಸಲು ಯಾವ ಸರ್ಕಾರಗಳು ಮನಸ್ಸು ಮಾಡಲಿಲ್ಲ. ಜಲಾಶಯ ನೀರಿನ ಮಟ್ಟವನ್ನು 519.60ರಿಂದ 524.256ಕ್ಕೆ ನೀರು ನಿಲ್ಲಿಸಿದಾಗ ಹಿನ್ನೀ–ರಿನಿಂದ ಮುಳುಗಡೆ ಹೊಂದುವ ಜಮೀನುಗಳಿಗೆ ಪರಿಹಾರ ನೀಡುವುದು, ಪುನರ್ ವಸತಿ ಹಾಗೂ ಪುನರ್ ನಿರ್ಮಾಣಕ್ಕೆ ಈ ಸದ್ಯ 1 ಲಕ್ಷ ಕೋಟಿ ಹಣ ಬೇಕಾಗುತ್ತದೆ. ಈ ಮೊದಲು ಅಂದರೆ 2010–13ನೇ ಸಾಲಿನಲ್ಲಿ ನ್ಯಾಯಾಧೀಕಣ ತೀರ್ಪು ನೀಡಿದ ನಂತರ ಶೀಘ್ರದಲ್ಲಿ ಕೆಲಸ ಪ್ರಾರಂಭಿಸಿದ್ದರೆ, ಆ ಸಂದರ್ಭದಲ್ಲಿ ಅಂದರೆ 2013ರಲ್ಲಿ ಕೇವಲ ಅಂದಾಜು 17 ಸಾವಿರ ಕೋಟಿ ರೂ ಗಳು ಮಾತ್ರ ವೆಚ್ಚ ತಗುಲುತ್ತಿತ್ತು. ಜನಪ್ರತಿನಿಧಿಗಳ ರೈತ ವಿರೋಧ ನೀತಿ ಹಾಗೂ ಇಚ್ಛಾಶಕ್ತಿ ಕೊರತೆಯಿಂದಾಗಿ ಮಹಾರಾಷ್ಟ್ರದವರು ತಗೆಯುತ್ತಿರುವ ಮೊಂಡು ಕ್ಯಾತೆಯನ್ನೇ ಮುಂದಿಟ್ಟುಕೊಂಡು ಅನಾವಶ್ಯಕವಾಗಿ ವಿಳಂಭ ಮಾಡುತ್ತಾ ಬಂದಿರುತ್ತಾರೆ. ಅದರ ಪರಿಣಾಮವೇ ಈಗ 1 ಲಕ್ಷ ಕೋಟಿಗೆ ಬಂದು ತಲುಪಿದೆ. ಇವರನ್ನು ನಂಬಿ ಮತ ಹಾಕಿ ಅಧಿಕಾರ ಕೊಟ್ಟ ರೈತರ ಬೆನ್ನೆಲುಬನ್ನು ಮುರಿದಿದ್ದಾರೆ. ಕಾರಣ ರೈತರ ಬದುಕು ಹಸನಾಗಿಸಲು ಸಾಲದಿಂದ ಮುಕ್ತರಾಗಿಸಲು ನ್ಯಾಯಾಧೀಕರಣದ ತೀರ್ಪಿನಂತೆ ಜಲಾಶಯದ ನೀರಿನ ಮಟ್ಟವನ್ನು 524.256ಕ್ಕೆ ನಿಲ್ಲಿಸಿ ನಮ್ಮ ರಾಜ್ಯಕ್ಕೆ ಹಂಚಿಕೆಯಾದ ನೀರನ್ನು ನಮ್ಮ ಪಾಲಿಗೆ ಮೀಸಲಿಡಲು ಹಕ್ಕೊತ್ತಾಯ ಮಾಡುವುದು. ಹಾಗೂ ಅವಳಿ ಜಿಲ್ಲೆಯ ರೈತರಿಗೆ ಹಂಚಿಕೆಯಾದ ಮತ್ತು ಬಳಸಿಕೊಳ್ಳಬೇಕಾದ ನೀರಿನ ಒಟ್ಟು ಪ್ರಮಾಣ ಎಷ್ಟು? ಎಂಬುವುದರ ಕುರಿತು ಚರ್ಚಿಸಲು ವಿಚಾರ ಸಂಕಿರಣವನ್ನು ವಿಜಯಪುರ ನಗರದ ಕಂದಗಲ್ ಹಣಮಂತರಾಯ ರಂಗಮಂದಿರದಲ್ಲಿ ದಿನಾಂಕ 08–06–2026ರ ಸೋಮವಾರದಂದು ಬೆಳಿಗ್ಗೆ 10–30 ಘಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ರೈತ ಮುಖಂಡ ಸಿದ್ದನಗೌಡ ಪಾಟೀಲ ಹಾಗೂ ಬಸವರಾಜ ಸಿದ್ದಾಪೂರ ಮಾತನಾಡಿ, ವಿಚಾರ ಸಂಕಿರಣದಲ್ಲಿ ಡಾ॥ ಸಿದ್ಧಲಿಂಗ ಮಹಾಸ್ವಾಮಿಗಳು ವಿರಕ್ತಮಠ ಇಂಗಳೇಶ್ವರ, ಸಂಗನಬಸವ ಮಹಾಸ್ವಾಮಿಗಳು ಶ್ರೀಮಠ ಹುಣಶ್ಯಾಳ ಪಿ.ಬಿ ಸಾನಿಧ್ಯ ವಹಿಸಲಿದ್ದು. ವಿಚಾರ ಸಂಕಿರಣದ ವಿಷಯ ಮಂಡನೆಯನ್ನು ಡಾ॥ ಕೃಷ್ಣ ಕೊಲ್ಹಾರ ಕುಲಕರ್ಣಿ, ಡಾ॥ ರಾಜೇಂದ್ರ ಪೋದ್ದಾರ, ಪಂಚಪ್ಪ ಕಲಬುರ್ಗಿ ನಡೆಸಿ ಕೊಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ವ್ಹಿ.ಸಿ. ಬಿರಾದಾರ ಮತ್ತು ಚಾಣಕ್ಯ ಕರಿಯರ್ ಅಕಾಡೆಮಿಯ ಸಂಸ್ಥಾಪಕ ಅಧ್ಯಕ್ಷರಾದ ನಿಂಗನಗೌಡ.ಎಮ್.ಬಿರಾದಾರ ಪಾಲ್ಗೊಳ್ಳಲಿದ್ದು ವಿಜಯಪುರ ಮತ್ತು ಬಾಗಲಕೋಟ ಅವಳಿ ಜಿಲ್ಲೆಯ ರೈತರು ಸೇರಿದಂತೆ ಉತ್ತರ ಕರ್ನಾಟಕ ಭಾಗದ ರೈತರು ಈ ವಿಚಾರ ಸಂಕಿರಣಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕೆಂದು ರೈತರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಹೊನಕೇರೆಪ್ಪ ತೆಲಗಿ, ಸಂಗನಗೌಡ ಪಾಟೀಲ ಮುಂತಾದವರು ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR